


Volume : 9 | Issue : 192 | October : 18 : 2026 : Sunday
ಸಂಪುಟ : ೯ | ಸಂಚಿಕೆ : ೧೯೨ | ಅಕ್ಟೋಬರ್ : 18 : 2026 : ಭಾನುವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481




ಚಿರು ನೆನಪಿನಲ್ಲಿ ಮೇಘನಾ ರಾಜ್: ದಿವಂಗತ ನಟ ಚಿರಂಜೀವಿ ಸರ್ಜಾ ಅವರ ಜನ್ಮದಿನದಂದು ಪತಿಯೊಂದಿಗಿನ ಮಧುರ ನೆನಪುಗಳನ್ನು ಹಂಚಿಕೊಂಡು ಭಾವುಕ ಪೋಸ್ಟ್ ಮಾಡಿದ ನಟ ಮೇಘನಾ ರಾಜ್.

"ಪ್ರಜಾಪ್ರಭುತ್ವ, ಸಂವಿಧಾನದ ಮೌಲ್ಯಗಳನ್ನು ರಕ್ಷಿಸಿ" ಪುಟ 2

'ಕೆಪಿಎಸ್‌ಸಿ ಹಗರಣ ಬಿಜೆಪಿಯ ಕೂಸು' ಪುಟ 4

# ಸ್ಟಿಂಗ್ ಸುಳಿಗೆ ಬೀದಿಗಿಳಿದ ಜೆಡಿಎಸ್

***ಸ್ಟಿಂಗ್ ಆಪರೇಷನ್ ಪ್ರಕರಣದ ಆರೋಪಿಗಳನ್ನು ಬಂಧಿಸುವಂತೆ ಒತ್ತಾಯಿಸಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ನೇತೃತ್ವದಲ್ಲಿ ಜೆಡಿಎಸ್ ನಾಯಕರು ಜೆ.ಪಿ. ಭವನದಿಂದ ಫ್ರೀಡಂ ಪಾರ್ಕ್‌ವರೆಗೆ ಪಾದಯಾತ್ರೆ ನಡೆಸಿ, ಡಿಜಿಪಿ ಸಲೀಂ ಅವರಿಗೆ ದೂರು ಸಲ್ಲಿಸಿದರು.***

● ವಿಕ್ರಮ ವಾಹಿನಿ । ಬೆಂಗಳೂರು

ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಭಾಗಿಯಾಗಿದ್ದಾರೆಂದು ಆರೋಪಿಸಲಾದ ರಾಕೇಶ್ ಶೆಟ್ಟಿ ಹಾಗೂ ಅವರ ಸಹಚರರನ್ನು ತಕ್ಷಣ ಬಂಧಿಸಬೇಕು ಎಂದು ಆಗ್ರಹಿಸಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ನೇತೃತ್ವದಲ್ಲಿ ಜೆಡಿಎಸ್ ನಾಯಕರು ಶನಿವಾರ ನಗರದಲ್ಲಿ ಪಾದಯಾತ್ರೆ ನಡೆಸಿ ಪ್ರತಿಭಟನೆ ನಡೆಸಿದರು.

ನಗರದ ಶೇಷಾದ್ರಿಪುರಂನಲ್ಲಿರುವ ಜೆಡಿಎಸ್ ಕೇಂದ್ರ ಕಚೇರಿ ಜೆ.ಪಿ. ಭವನದಿಂದ ಆರಂಭವಾದ ಪಾದಯಾತ್ರೆ ಫ್ರೀಡಂ ಪಾರ್ಕ್‌ವರೆಗೆ ಸಾಗಿತು. ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಗೆ ಮುತ್ತಿಗೆ ಹಾಕಲು ಮುಂದಾದ ನಾಯಕರನ್ನು ಪೊಲೀಸರು ಹಲವು ಬಾರಿ ತಡೆದರು.

ಫ್ರೀಡಂ ಪಾರ್ಕ್ ಬಳಿ ಬ್ಯಾರಿಕೇಡ್‌ಗಳನ್ನು ಅಳವಡಿಸಿ, ಬಸ್‌ಗಳನ್ನು ರಸ್ತೆಗೆ ಅಡ್ಡಲಾಗಿ ನಿಲ್ಲಿಸಿದ್ದರಿಂದ ಅಲ್ಲಿಯೇ ಪ್ರತಿಭಟನೆ ಮುಂದುವರಿಸಲಾಯಿತು. ಸ್ಟಿಂಗ್ ಪ್ರಕರಣದ ಆರೋಪಿಗಳನ್ನು ಬಂಧಿಸಲು ಎರಡು ದಿನಗಳ ಗಡುವು ನೀಡಿದ್ದರೂ ಪೊಲೀಸರು ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದ ಕುಮಾರಸ್ವಾಮಿ, ಬಳಿಕ ಡಿಜಿಪಿ ಸಲೀಂ ಅವರನ್ನು ಭೇಟಿಯಾಗಿ ದೂರು ಸಲ್ಲಿಸಿದರು. ಪ್ರಕರಣದ ಎಲ್ಲ ಆಯಾಮಗಳಲ್ಲೂ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**ಸಿದ್ದರಾಮಯ್ಯ ವಿರುದ್ಧ ಸಂಚಿನ ಆರೋಪ:** ಸ್ಟಿಂಗ್ ಆಪರೇಷನ್ ಹಿಂದೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ರಾಕೇಶ್ ಶೆಟ್ಟಿ ಅವರ ಕೈವಾಡವಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು. ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸುವ ಉದ್ದೇಶದಿಂದ ಸಂಚು ರೂಪಿಸಲಾಗಿದೆ ಎಂಬ ಗಂಭೀರ ಆರೋಪವನ್ನೂ ಮಾಡಿದರು. ರಾಕೇಶ್ ಶೆಟ್ಟಿ ಅವರು ವಿಡಿಯೊ ಚಿತ್ರೀಕರಣದಲ್ಲಿ ತಮ್ಮ ಪಾತ್ರದ ಬಗ್ಗೆ ಬಹಿರಂಗವಾಗಿ ಹೇಳಿಕೊಂಡಿದ್ದಾರೆ ಎಂದು ಪ್ರತಿಪಾದಿಸಿದ ಅವರು, ಪ್ರಕರಣದ ತನಿಖೆ ನಡೆಸಿ ಸತ್ಯಾಂಶವನ್ನು ಹೊರತರಬೇಕು ಎಂದರು. ತಮ್ಮ ಹೋರಾಟ ವೈಯಕ್ತಿಕವಲ್ಲ; ವಿಜಯದಶಮಿ ಬಳಿಕ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

**ಜೆಡಿಎಸ್ ದೂರಿನಲ್ಲಿ ಗಂಭೀರ ಆರೋಪ:** ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶ್ ಬಾಬು ನೇತೃತ್ವದಲ್ಲಿ ಪಕ್ಷದ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸಹಿ ಮಾಡಿದ ದೂರಿನಲ್ಲಿ, ಮಹಿಳೆಯೊಬ್ಬರ ಅನುಮತಿಯಿಲ್ಲದೆ ರಹಸ್ಯವಾಗಿ ವಿಡಿಯೊ ಚಿತ್ರೀಕರಿಸಿ, ಅದನ್ನು ರಾಜಕೀಯ ಉದ್ದೇಶಕ್ಕೆ ಬಳಸಲಾಗಿದೆ ಎಂದು ಆರೋಪಿಸಲಾಗಿದೆ.

ವಿಡಿಯೊದ ಸತ್ಯಾಸತ್ಯತೆ ಪರಿಶೀಲಿಸಿ, ಮೂಲವನ್ನು ಪತ್ತೆಹಚ್ಚಬೇಕು. ಅಗತ್ಯವಿದ್ದಲ್ಲಿ ಧ್ವನಿ ಮಾದರಿ ಪರೀಕ್ಷೆ ನಡೆಸಿ, ವಿಡಿಯೊದಲ್ಲಿ ತಿದ್ದುಪಡಿ ನಡೆದಿದೆಯೇ ಎಂಬುದನ್ನೂ ತನಿಖೆ ಮಾಡಬೇಕು ಎಂದು ದೂರಿನಲ್ಲಿ ಒತ್ತಾಯಿಸಲಾಗಿದೆ. ಮಾಹಿತಿ ತಂತ್ರಜ್ಞಾನ ಕಾಯ್ದೆ ಹಾಗೂ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಸೆಕ್ಷನ್‌ಗಳಡಿ ಕ್ರಮ ಕೈಗೊಳ್ಳುವಂತೆಯೂ ಮನವಿ ಮಾಡಲಾಗಿದೆ.

ಡಿಜಿಪಿ ಅವರನ್ನು ಭೇಟಿಯಾದ ನಿಯೋಗದಲ್ಲಿ ಮಾಜಿ ಸಚಿವ ಎಚ್.ಡಿ. ರೇವಣ್ಣ, ಬಂಡೆಪ್ಪ ಕಾಶೆಂಪುರ, ಸಾ.ರಾ. ಮಹೇಶ್, ಸಿ.ಬಿ. ಸುರೇಶ್ ಬಾಬು ಸೇರಿದಂತೆ ಪಕ್ಷದ ಶಾಸಕರು, ಸಂಸದರು ಹಾಗೂ ಮುಖಂಡರು ಉಪಸ್ಥಿತರಿದ್ದರು.



## ಸಿದ್ದರಾಮಯ್ಯ ಅವರೇ, ನಿಮ್ಮ ರಕ್ತ ಕುದಿಯುತ್ತಿಲ್ಲವೇ?

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವರ್ಚಸ್ಸಿಗೆ ಧಕ್ಕೆ ತಂದು, ಅವರನ್ನು ಅಧಿಕಾರದಿಂದ ಕೆಳಗಿಳಿಸುವ ಸಂಚು ನಡೆದಿದೆ ಎಂಬ ಆರೋಪಗಳ ಬಗ್ಗೆ ಅವರೇ ಮೌನವಾಗಿರುವುದೇಕೆ? ನಿಮ್ಮ ವಿರುದ್ಧದ ಸಂಚು ಕಂಡು ರಕ್ತ ಕುದಿಯುತ್ತಿಲ್ಲವೇ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದರು.

ಸ್ಟಿಂಗ್ ಪ್ರಕರಣದ ಆರೋಪಿ ರಾಕೇಶ್ ಶೆಟ್ಟಿ ಮತ್ತು ಆತನ ಸಹಚರರನ್ನು ಬಂಧಿಸುವಂತೆ ಆಗ್ರಹಿಸಿ ಪೊಲೀಸ್ ಮಹಾನಿರ್ದೇಶಕರ ಕಚೇರಿಗೆ ದೂರು ಸಲ್ಲಿಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಕರಣದ ಕುರಿತು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ಅವರು ಅನ್ಯಾಯದ ವಿರುದ್ಧ ಧ್ವನಿ ಎತ್ತುವ ವ್ಯಕ್ತಿ. ಆದರೆ, ತಮ್ಮ ಹೆಸರಿಗೆ ಕಳಂಕ ತರುವ ಉದ್ದೇಶದಿಂದ ಸ್ಟಿಂಗ್ ಕಾರ್ಯಾಚರಣೆ ನಡೆಸಲಾಗಿದೆ ಎಂಬ ಆರೋಪಗಳಿದ್ದರೂ ಮೌನವಾಗಿರುವುದು ನೋವು ತಂದಿದೆ.

ರಾಜಕೀಯವಾಗಿ ಹಲವು ವಿಚಾರಗಳಲ್ಲಿ ಸಿದ್ದರಾಮಯ್ಯ ಅವರೊಂದಿಗೆ ಸಂಘರ್ಷ ನಡೆಸಿದ್ದರೂ, ಅವರ ವಿರುದ್ಧದ ಇಂತಹ ಸಂಚುಗಳಿಗೆ ಬೆಂಬಲ ನೀಡುವ ಪ್ರಶ್ನೆಯೇ ಇಲ್ಲ ಎಂದರು.

**ವಿಜಯದಶಮಿ ಬಳಿಕ ಮತ್ತೆ ಬೀದಿಗಿಳಿಯುತ್ತೇನೆ**

ರಾಕೇಶ್ ಶೆಟ್ಟಿ ಮತ್ತು ಆತನ ಸಹಚರರು ರಹಸ್ಯ ಕಾರ್ಯಾಚರಣೆ ಹೆಸರಿನಲ್ಲಿ ಹಣ ವಸೂಲಿ ಮಾಡುವುದು, ರಾಜಕಾರಣಿಗಳು, ಪೊಲೀಸರು ಹಾಗೂ ಸರ್ಕಾರಿ ಅಧಿಕಾರಿಗಳನ್ನು ಬೆದರಿಸಿ ಬ್ಲ್ಯಾಕ್‌ಮೇಲ್ ಮಾಡಿರುವ ಆರೋಪಗಳ ಕುರಿತು ಡಿಜಿಪಿಗೆ ಸುದೀರ್ಘ ದೂರು ಸಲ್ಲಿಸಲಾಗಿದೆ. ಈ ಹಿಂದೆ ಪೊಲೀಸ್ ಆಯುಕ್ತರಿಗೂ ದೂರು ನೀಡಿದ್ದೇವೆ. ಆದರೂ ಆರೋಪಿಗಳ ಬಂಧನಕ್ಕೆ ಕ್ರಮ ಕೈಗೊಳ್ಳದಿದ್ದರೆ ವಿಜಯದಶಮಿ ಬಳಿಕ ಮತ್ತೆ ಬೀದಿಗಿಳಿದು ಹೋರಾಟ ನಡೆಸುತ್ತೇನೆ ಎಂದು ಎಚ್ಚರಿಸಿದರು.

ಆರೋಪಿಗಳನ್ನು ಬಂಧಿಸುವವರೆಗೆ ಹೋರಾಟ ನಿಲ್ಲಿಸುವುದಿಲ್ಲ. ಪೊಲೀಸ್ ಇಲಾಖೆ ಮುಂದಿನ ದಿನಗಳಲ್ಲಿ



ಏನು ಕ್ರಮ ಕೈಗೊಳ್ಳುತ್ತದೆ ಎಂಬುದನ್ನು ನೋಡುತ್ತೇವೆ. ಕ್ರಮ ಕೈಗೊಳ್ಳದಿದ್ದರೆ ಮುಂದಿನ ಹೋರಾಟದ ರೂಪುರೇಷೆ ನಿರ್ಧರಿಸಲಾಗುವುದು ಎಂದು ಹೇಳಿದರು.

**ಆರೋಪಿಯ ಬೂಟ್ ಪಾಲಿಶ್ ಮಾಡುತ್ತಿದೆ ಸರ್ಕಾರ**

ಸ್ಟಿಂಗ್ ಪ್ರಕರಣವನ್ನು ಮುಖ್ಯಮಂತ್ರಿಗಳೇ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಿರುವುದು ನಾಚಿಕೆಗೇಡಿನ ಸಂಗತಿ. ಇಷ್ಟೆಲ್ಲ ಬೆಳವಣಿಗೆಗಳಾದರೂ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳದಿರುವ ಸರ್ಕಾರದ ನಡೆ ಪ್ರಶ್ನಾರ್ಹವಾಗಿದೆ ಎಂದು ಕುಮಾರಸ್ವಾಮಿ ಟೀಕಿಸಿದರು.

ಮುಖ್ಯಮಂತ್ರಿಗಳು ತಮ್ಮ ವಿರುದ್ಧದ ಸಂಚಿನಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಿದ ಅವರು, ಸಚಿವರು ಮತ್ತು ಶಾಸಕರನ್ನು ತಮ್ಮ ಹಿಡಿತದಲ್ಲಿಟ್ಟುಕೊಳ್ಳಲು ಇಂತಹ ಕೃತ್ಯಗಳಿಗೆ ಮುಂದಾಗಿದ್ದಾರೆ ಎಂದು ದೂರಿದರು. ಗೃಹ ಸಚಿವರ ಹೇಳಿಕೆಗಳೂ ನಿರಾಶೆ ಮೂಡಿಸಿವೆ. ಸರ್ಕಾರ ಆರೋಪಿಯ ಬೂಟ್ ಪಾಲಿಶ್ ಮಾಡಿಕೊಂಡು ಕುಳಿತಿದೆ ಎಂದು ಕಿಡಿಕಾರಿದರು.

ನವೆಂಬರ್ 1ರ ಕನ್ನಡ ರಾಜ್ಯೋತ್ಸವದಂದು, ಇಂತಹ ಸಂಚಿನ ಹಿಂದಿದ್ದಾರೆ ಎಂದು ತಾವು ಆರೋಪಿಸುತ್ತಿರುವ ವ್ಯಕ್ತಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಿ ಎಂದು ವ್ಯಂಗ್ಯವಾಡಿದರು. ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ, ಆರೋಪಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

### 'ನನ್ನ ಆರೋಗ್ಯ ಚೆನ್ನಾಗಿದೆ, ಪಾದಯಾತ್ರೆಯೇ ಸಾಕ್ಷಿ'

● ವಿಕ್ರಮ ವಾಹಿನಿ । ಬೆಂಗಳೂರು

"ನನಗೆ ನಾಲ್ಕನೇ ಬಾರಿ ಓಪನ್ ಹಾರ್ಟ್ ಸರ್ಜರಿ ಆಗಬೇಕು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬಯಸಿದ್ದಾರೆ. ಆದರೆ, ನನ್ನ ಆರೋಗ್ಯ ಚೆನ್ನಾಗಿದೆಯೇ ಇಲ್ಲವೇ ಎಂಬುದಕ್ಕೆ ನಾನು ನಡೆಸುತ್ತಿರುವ ಪಾದಯಾತ್ರೆಯೇ ಉತ್ತರ ನೀಡುತ್ತದೆ" ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿರುಗೇಟು ನೀಡಿದರು.

ಪಾದಯಾತ್ರೆ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕೆಲವರಿಗೆ ತಾನೇ ದೊಡ್ಡ ಅಡ್ಡಿಯಾಗಿದ್ದೇನೆ. ಅವರು ಮಾಡುತ್ತಿರುವ ತಪ್ಪು ಕೆಲಸಗಳಿಗೆ ಅಡ್ಡಿಯಾಗಿರುವುದರಿಂದ ನನ್ನ ಸಾವನ್ನು ಬಯಸುತ್ತಿದ್ದಾರೆ ಎಂದು ಕುಟುಕಿದರು.

ದೇವರ ದಯೆ ಹಾಗೂ ಪಕ್ಷದ ಕಾರ್ಯಕರ್ತರು, ರಾಜ್ಯದ ಜನರ ಆಶೀರ್ವಾದದಿಂದ ತಮ್ಮ ಆರೋಗ್ಯ ಚೆನ್ನಾಗಿದೆ. ಭಗವಂತನ ಕರುಣೆ ಸದಾ ತಮ್ಮ ಮೇಲಿದೆ ಎಂದು ನಂಬಿದ್ದೇನೆ ಎಂದರು.

ಪ್ರಿಯಾಂಕ್ ಖರ್ಗೆ ತಮ್ಮ ಸಾವನ್ನು ಬಯಸಿರಬಹುದು. ಆದರೆ, ತಾವು ಕಾರ್ಯಕರ್ತರು ಮತ್ತು ಮುಖಂಡರೊಂದಿಗೆ ಪಾದಯಾತ್ರೆಯಲ್ಲಿ ಹೆಜ್ಜೆ ಹಾಕುತ್ತಿರುವುದನ್ನು ನೋಡಿ ಗೃಹ ಸಚಿವರ ಮನಸ್ಸು ಹೇಗೆ ಸ್ಪಂದಿಸುತ್ತಿದೆಯೋ ಗೊತ್ತಿಲ್ಲ ಎಂದು ವ್ಯಂಗ್ಯವಾಡಿದರು.

ಇತರರ ನೋವು ಮತ್ತು ಸಾವನ್ನು ಬಯಸುವ ಮನಸ್ಥಿತಿಯವರಿಗೆ ಏನು ಹೇಳಲು ಸಾಧ್ಯ? ಅಂತಹ ವಿಕೃತ ಮನಸ್ಸಿಗೆ ಯಾವುದೇ ಔಷಧವಿಲ್ಲ ಎಂದು ಕುಮಾರಸ್ವಾಮಿ ಟೀಕಿಸಿದರು.

### ■ ಸುದ್ದಿ ಚುಟುಕು

### ಗೂಗಲ್ ಮ್ಯಾಪ್ ನಂಬಿ ಕಾಡಿನಲ್ಲಿ ಸಿಲುಕಿದ 9 ಟೆಕ್ಕಿಗಳು

● ವಿಕ್ರಮ ವಾಹಿನಿ । ಬೆಂಗಳೂರು

ಮೈಸೂರಿನ ದಸರಾ ವೀಕ್ಷಿಸಿ ಚೆನ್ನೈಗೆ ತೆರಳುತ್ತಿದ್ದ ಬೆಂಗಳೂರಿನ ಒಂಬತ್ತು ಮಂದಿ ಸಾಫ್ಟ್‌ವೇರ್ ಎಂಜಿನಿಯರ್‌ಗಳು ಗೂಗಲ್ ಮ್ಯಾಪ್ ತೋರಿಸಿದ ಮಾರ್ಗದಲ್ಲಿ ಸಂಚರಿಸಿ ದಟ್ಟ ಕಾಡಿನೊಳಗೆ ಸಿಲುಕಿಕೊಂಡ ಘಟನೆ ನಡೆದಿದೆ.

ರೋಜರ್ ಪ್ರಿನ್ಸ್, ಮಣಿ, ಪ್ರಿನ್ಸ್ ಮಾರ್ಟಿನ್, ಅರಿವುಮತಿ, ಗಣ, ಶರ್ಮಿಳಾ, ತ್ರಿಷಾ, ಬೊಪೇಶ್ ಮತ್ತು ಜೋಸಯ್ಯ ಅವರು ಮೈಸೂರಿನಿಂದ ಚಾಮರಾಜನಗರ ಮಾರ್ಗವಾಗಿ ದಿಂಬಂ ಘಾಟ್ ಮೂಲಕ ಚೆನ್ನೈಗೆ ಪ್ರಯಾಣಿಸುತ್ತಿದ್ದರು. ರಾತ್ರಿ ವೇಳೆ ರಸ್ತೆ ಗುರುತಿಸಲು ಕಷ್ಟವಾದಾಗ ಗೂಗಲ್ ಮ್ಯಾಪ್ ನೆರವು ಪಡೆದಿದ್ದಾರೆ.

ಮ್ಯಾಪ್ ತೋರಿಸಿದ ಕಾಡಿನ ಒಳಭಾಗದ ರಸ್ತೆಯಲ್ಲಿ ಸಾಗಿದ ಕಾರು ರಸ್ತೆ ಬದಿಯ ಕಂದಕದಲ್ಲಿ ಸಿಲುಕಿಕೊಂಡಿದೆ. ಕತ್ತಲಿನಲ್ಲಿ ಹೊರಬರಲಾಗದೆ ತಂಡ ರಾತ್ರಿ ಇಡೀ ಕಾರಿನಲ್ಲೇ ಕಳೆಯಬೇಕಾಯಿತು. ಈ ವೇಳೆ ಕಾಡಾನೆಯ ಘೀಳಿಡುವ ಶಬ್ದ ಕೇಳಿಬಂದಿದ್ದರಿಂದ ಆತಂಕಗೊಂಡ ಟೆಕ್ಕಿಗಳು ಕಾರಿನಿಂದ ಹೊರಬರದೆ ಅದರೊಳಗೇ ಉಳಿದಿದ್ದಾರೆ.

ಬೆಳಗಾದ ಬಳಿಕ ಪೊಲೀಸರಿಗೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ಬಂದ ಅಗ್ನಿಶಾಮಕ ಸಿಬ್ಬಂದಿ ಮತ್ತು ತಮಿಳುನಾಡು ಪೊಲೀಸರು ಕಂದಕದಲ್ಲಿ ಸಿಲುಕಿದ್ದ ಕಾರನ್ನು ಮೇಲಕ್ಕೆತ್ತಿ, ಒಂಬತ್ತು ಮಂದಿಯನ್ನು ಸುರಕ್ಷಿತವಾಗಿ ಕಳುಹಿಸಿಕೊಟ್ಟಿದ್ದಾರೆ.

### ಸಹೋದ್ಯೋಗಿಗಳ ಪತ್ನಿಯರ ಜತೆ ಸಂಬಂಧ: ಮೇಜರ್ ವಜಾಕ್ಕೆ ಸೇನೆ ಸಿದ್ಧತೆ

● ವಿಕ್ರಮ ವಾಹಿನಿ । ನವದೆಹಲಿ

ಇಬ್ಬರು ಸಹ ಸೇನಾ ಅಧಿಕಾರಿಗಳ ಪತ್ನಿಯರೊಂದಿಗೆ ವಿವಾಹೇತರ ಸಂಬಂಧ ಹೊಂದಿದ ಆರೋಪ ಎದುರಿಸುತ್ತಿರುವ ಮೇಜರ್ ಒಬ್ಬರನ್ನು ಕೋರ್ಟ್ ಮಾರ್ಷಲ್ ಇಲ್ಲದೆ ಆಡಳಿತಾತ್ಮಕವಾಗಿ ಸೇವೆಯಿಂದ ವಜಾಗೊಳಿಸಲು ಸೇನೆ ಮುಂದಾಗಿದೆ. ಈ ಸಂಬಂಧ ಆಗಸ್ಟ್ 10ರಂದು ಸೇನಾ ನಿಯಮಗಳ ಅಡಿಯಲ್ಲಿ ಶೋಕಾಸ್ ನೋಟಿಸ್ ಜಾರಿಗೊಳಿಸಿ, ವಜಾಗೊಳಿಸದಿರಲು ಕಾರಣವೇನು ಎಂಬುದನ್ನು ವಿವರಿಸುವಂತೆ ಸೂಚಿಸಲಾಗಿದೆ.

ಈ ಕ್ರಮ ಪ್ರಶ್ನಿಸಿ ಮೇಜರ್ ಸಶಸ್ತ್ರ ಪಡೆಗಳ ನ್ಯಾಯಮಂಡಳಿಯ ಪ್ರಧಾನ ಪೀಠದ ಮೊರೆ ಹೋಗಿದ್ದರು. ಆದರೆ, ಅಕ್ಟೋಬರ್ 14ರಂದು ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮಂಡಳಿ, ನೋಟಿಸ್‌ಗೆ ಉತ್ತರ ಸಲ್ಲಿಸುವಂತೆ ಸೂಚಿಸಿತು.

2023ರ ಆಗಸ್ಟ್‌ನಲ್ಲಿ ಮೇಜರ್ ಅವರ ಆಗಿನ ಪತ್ನಿ ಸೇನಾ ಪ್ರಧಾನ ಕಚೇರಿಗೆ ದೂರು ನೀಡಿದ ಬಳಿಕ ಪ್ರಕರಣ ಬೆಳಕಿಗೆ ಬಂದಿತ್ತು. ವ್ಯಭಿಚಾರ, ಮಾದಕ ವಸ್ತು ಸೇವನೆ ಮತ್ತು ನಿರ್ಲಕ್ಷ್ಯದ ಆರೋಪಗಳ ಜೊತೆಗೆ, ನಾಲ್ವರು ಮಹಿಳೆಯರೊಂದಿಗೆ ಸಂಬಂಧ ಹೊಂದಿದ್ದರೆಂದು ಅವರು ದೂರಿನಲ್ಲಿ ಉಲ್ಲೇಖಿಸಿದ್ದರು. ಅವರಲ್ಲಿ ಇಬ್ಬರು ಸಹ ಸೇನಾ ಅಧಿಕಾರಿಗಳ ಪತ್ನಿಯರು ಎಂಬ ಆರೋಪವೂ ಇತ್ತು.

ಈ ಸಂಬಂಧ ಸೇನೆ ವಿಚಾರಣಾ ನ್ಯಾಯಾಲಯ ರಚಿಸಿ ತನಿಖೆ ನಡೆಸಿತ್ತು. ಆದರೆ, ತನಿಖೆಯ ವೇಳೆ ಸೇನಾ ನಿಯಮ 180 ಉಲ್ಲಂಘಿಸಲಾಗಿದೆ ಹಾಗೂ ಸಾಕ್ಷ್ಯ ಸಂಗ್ರಹ ಮತ್ತು ಎಲೆಕ್ಟ್ರಾನಿಕ್ ಸಾಧನಗಳ ವಶಪಡಿಸಿಕೊಳ್ಳುವಿಕೆಯಲ್ಲಿ ಲೋಪಗಳಾಗಿವೆ ಎಂದು ಮೇಜರ್ ಆರೋಪಿಸಿದ್ದಾರೆ. ತನಿಖೆ ದೋಷಪೂರಿತವಾಗಿರುವುದರಿಂದ ಪ್ರಸ್ತಾವಿತ ವಜಾ ಕ್ರಮ ಕಾನೂನುಬದ್ಧವಲ್ಲ ಎಂಬುದು ಅವರ ವಾದವಾಗಿದೆ. ಪ್ರಕರಣದ ಆರೋಪಗಳು ಇನ್ನೂ ಆರೋಪಗಳಾಗಿದ್ದು, ಅವು ಸಾಬೀತಾಗಿರುವುದಿಲ್ಲ.

### ಎಲ್‌ನಿನೊ ಹೊಡೆತ: ಫೆಬ್ರವರಿಯಲ್ಲೇ ಬೇಸಿಗೆ ಬಿಸಿ!

● ವಿಕ್ರಮ ವಾಹಿನಿ । ಹೈದರಾಬಾದ್

ಎಲ್‌ನಿನೊ ಪ್ರಭಾವದಿಂದ 2027ರ ಫೆಬ್ರವರಿಯಲ್ಲೇ ಭಾರತದ ಹಲವು ಭಾಗಗಳಲ್ಲಿ ಬೇಸಿಗೆಯಂತಹ ವಾತಾವರಣ ಉಂಟಾಗುವ ಸಾಧ್ಯತೆಯಿದೆ. ಈ ಬಾರಿ ಚಳಿಗಾಲದಲ್ಲಿಯೂ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಿರಬಹುದು. ಮಳೆಯ ಕೊರತೆ, ಜಲಾಶಯಗಳಲ್ಲಿ ನೀರಿನ ಸಂಗ್ರಹ ಇಳಿಕೆ ಮತ್ತು ಕೃಷಿ ಮೇಲಿನ ಒತ್ತಡದ ಬಗ್ಗೆ ಕ್ಲೈಮೇಟ್ ಟ್ರೆಂಡ್ಸ್ ಸಂಸ್ಥೆಯ ವರದಿ ಎಚ್ಚರಿಸಿದೆ. 3ನೇ ಪುಟಕ್ಕೆ...

### ಗಾಳಿ ಆಂಜನೇಯ ದೇವಸ್ಥಾನ ಮುಜರಾಯಿ ಸುಪರ್ದಿ ಆದೇಶ ರದ್ದು

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಪ್ರಸಿದ್ಧ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನವನ್ನು ಮುಜರಾಯಿ ಇಲಾಖೆಯ ಸುಪರ್ದಿಗೆ ವಹಿಸಿ ರಾಜ್ಯ ಸರ್ಕಾರ 2025ರ ಜುಲೈ 8ರಂದು ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದೆ. ದೇವಸ್ಥಾನವನ್ನು ಸರ್ಕಾರದ ಅಧೀನಕ್ಕೆ ಪಡೆಯುವ ಪ್ರಕ್ರಿಯೆಯಲ್ಲಿ ಕಾನೂನು ಲೋಪಗಳಿರುವುದನ್ನು ಪರಿಗಣಿಸಿದ ನ್ಯಾಯಾಲಯ, ಸರ್ಕಾರದ ಆದೇಶವನ್ನು ಅಸಿಂಧುಗೊಳಿಸಿದೆ.

ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಟ್ರಸ್ಟ್‌ನ ಸಂಚಾಲಕ ಬಿ.ಪಿ. ನಾಗರಾಜು ಹಾಗೂ ಇತರ ಟ್ರಸ್ಟಿಗಳು ಸರ್ಕಾರದ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ದೇವಸ್ಥಾನದ ಆಡಳಿತವನ್ನು ಮುಜರಾಯಿ ಇಲಾಖೆಯ ಸುಪರ್ದಿಗೆ ವಹಿಸುವ ಸರ್ಕಾರದ ನಿರ್ಧಾರ ಕಾನೂನುಬದ್ಧವಾಗಿಲ್ಲ ಎಂದು ಅರ್ಜಿದಾರರು ಆಕ್ಷೇಪ ವ್ಯಕ್ತಪಡಿಸಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರ ಏಕಸದಸ್ಯ ನ್ಯಾಯಪೀಠ, ಸರ್ಕಾರದ ಆದೇಶದಲ್ಲಿನ ಕಾನೂನು ಲೋಪಗಳನ್ನು ಪರಿಗಣಿಸಿ ಅದನ್ನು ರದ್ದುಪಡಿಸಿ ಆದೇಶಿಸಿದೆ.

ನ್ಯಾಯಾಲಯದ ಆದೇಶ ಪ್ರಕಟಗೊಂಡ ಒಂದು ವಾರದೊಳಗೆ ದೇವಸ್ಥಾನದ ಆಡಳಿತ ನಿರ್ವಹಣೆಯನ್ನು ಸಂಬಂಧಪಟ್ಟವರಿಗೆ ಹಸ್ತಾಂತರಿಸುವಂತೆ ಪ್ರಸ್ತುತ ಆಡಳಿತಾಧಿಕಾರಿಗೆ ನ್ಯಾಯಪೀಠ ನಿರ್ದೇಶನ ನೀಡಿದೆ. ಇದರಿಂದ ದೇವಸ್ಥಾನದ ಆಡಳಿತವನ್ನು ಮುಜರಾಯಿ ಇಲಾಖೆಯ ಸುಪರ್ದಿಗೆ ವಹಿಸಲು ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ತಡೆಯುಂಟಾಗಿದೆ.

ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿರುವ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಆಡಳಿತದ ವಿಚಾರದಲ್ಲಿ ಹೈಕೋರ್ಟ್ ನೀಡಿರುವ ಈ ತೀರ್ಪು ಮಹತ್ವ ಪಡೆದಿದೆ. ಸರ್ಕಾರದ ಆದೇಶವನ್ನು ಪ್ರಶ್ನಿಸಿ ಟ್ರಸ್ಟ್‌ನ ಪದಾಧಿಕಾರಿಗಳು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಬಳಿಕ ನ್ಯಾಯಾಲಯ ಈ ನಿರ್ಧಾರ ಕೈಗೊಂಡಿದೆ.

### ಗಾನ ಸಂಗೀತದ ರೂವಾರಿ ದೇವ ಇನ್ನಿಲ್ಲ

● ವಿಕ್ರಮ ವಾಹಿನಿ । ಚೆನ್ನೈ

ತಮಿಳು ಚಿತ್ರರಂಗದಲ್ಲಿ 'ಗಾನ' ಸಂಗೀತಕ್ಕೆ ವಿಶಿಷ್ಟ ಗುರುತು ತಂದುಕೊಟ್ಟ ಖ್ಯಾತ ಸಂಗೀತ ಸಂಯೋಜಕ ದೇವ (75) ಹೃದಯ ಸ್ತಂಭನದಿಂದ ಗುರುವಾರ ನಿಧನರಾದರು. ಚೆನ್ನೈನ ಕೋಡಂಬಾಕ್ಕಂನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು, ಚಿಕಿತ್ಸೆಗೆ ಸ್ಪಂದಿಸದೆ ಕೊನೆಯುಸಿರೆಳೆದರು. 2ನೇ ಪುಟಕ್ಕೆ...



### ಮಕ್ಕಳ ಇಂಟರ್‌ನೆಟ್ ಹಕ್ಕು ಎತ್ತಿಹಿಡಿದ ಸುಪ್ರೀಂ ಕೋರ್ಟ್

● ವಿಕ್ರಮ ವಾಹಿನಿ । ನವದೆಹಲಿ

ಇಂಟರ್‌ನೆಟ್ ಬಳಕೆ ಮಕ್ಕಳ ಹಕ್ಕಾಗಿದ್ದು, ಅವರ ಸ್ವಾತಂತ್ರ್ಯ ಮತ್ತು ಸುರಕ್ಷತೆ ಎರಡನ್ನೂ ರಕ್ಷಿಸುವುದು ಅಗತ್ಯ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಇದೇ ವೇಳೆ, ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ಅಕ್ರಮ ವಿಷಯಗಳನ್ನು ಅಂತರ್ಜಾಲ ದಿಂದ ತಕ್ಷಣ ತೆಗೆದುಹಾಕಲು ಕೇಂದ್ರ ಸರ್ಕಾರ ಮತ್ತು ಸಾಮಾಜಿಕ ಮಾಧ್ಯಮ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ. 2ನೇ ಪುಟಕ್ಕೆ...



### 'ಬಾಂಬೆ ಬಾಯ್ಸ್' ಪುಸ್ತಕದಿಂದ ನಾಯಕರ ಬಣ್ಣ ಬಯಲು: ವಿಶ್ವನಾಥ್

● ವಿಕ್ರಮ ವಾಹಿನಿ । ಬೆಂಗಳೂರು

'ಬಾಂಬೆ ಬಾಯ್ಸ್' ಪುಸ್ತಕ ಪ್ರಕಟವಾದರೆ ರಾಜ್ಯದ ಮೂರೂ ಪ್ರಮುಖ ರಾಜಕೀಯ ಪಕ್ಷಗಳ ಹಿರಿಯ ನಾಯಕರು ಸಂಕಷ್ಟಕ್ಕೆ ಸಿಲುಕಲಿದ್ದಾರೆ ಎಂದು ಹಿರಿಯ ರಾಜಕಾರಣಿ, ಮಾಜಿ ಸಚಿವ ಎಚ್. ವಿಶ್ವನಾಥ್ ಹೊಸ ಬಾಂಬ್ ಸಿಡಿಸಿದ್ದಾರೆ. ರಾಜ್ಯ ರಾಜಕೀಯದಲ್ಲಿ ಚರ್ಚೆಗೆ ಕಾರಣವಾಗಿರುವ ಸ್ಟಿಂಗ್ ಆಪರೇಷನ್ ಕುರಿತು ಮೊದಲ ಬಾರಿಗೆ ಪ್ರತಿಕ್ರಿಯಿಸಿರುವ ಅವರು, ರಾಜಕೀಯದಲ್ಲಿ ಭಿನ್ನಾಭಿಪ್ರಾಯಗಳು ಸಹಜ. ಆದರೆ, ವ್ಯಕ್ತಿಯೊಬ್ಬರ ರಾಜಕೀಯ ಬೆಳವಣಿಗೆಯನ್ನು ಕುಗ್ಗಿಸಲು ಈ ರೀತಿಯ ತಂತ್ರಗಳನ್ನು ಬಳಸುವುದು ಸರಿಯಲ್ಲ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ರಾಜಕೀಯವಾಗಿ ಮುಗಿಸಿದರೆ ತಮ್ಮ ರಾಜಕೀಯ ಹಾದಿ ಸುಗಮವಾಗಲಿದೆ. 2ನೇ ಪುಟಕ್ಕೆ...

## ಬಾಲಕಿ ಅತ್ಯಾಚಾರ, ಕೊಲೆ ಪ್ರಕರಣ: ಡಿಜಿಟಲ್ ಸಾಕ್ಷ್ಯಗಳೇ ನಿರ್ಣಾಯಕ

● ವಿಕ್ರಮ ವಾಹಿನಿ । ಮೈಸೂರು

ದಸರಾ ಸಂದರ್ಭದಲ್ಲಿ ಕುಟುಂಬದೊಂದಿಗೆ ಬಲೂನು ಮಾರಾಟಕ್ಕೆ ಬಂದಿದ್ದ ಬಾಲಕಿಯ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿದ ಪ್ರಕರಣದಲ್ಲಿ ಅಪರಾಧಿಗೆ ಮರಣದಂಡನೆ ವಿಧಿಸಲು ಡಿಜಿಟಲ್ ಸಾಕ್ಷ್ಯಗಳು ಪ್ರಮುಖ ಪಾತ್ರ ವಹಿಸಿವೆ ಎಂದು ಮೈಸೂರು ಪೋಕ್ಸೊ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕಿ ಕೆ.ಬಿ. ಜಯಂತಿ ತಿಳಿಸಿದರು.

ಪ್ರಕರಣದ ವಿಚಾರಣೆ ಕುರಿತು ಮಾಹಿತಿ ಹಂಚಿಕೊಂಡ ಅವರು, ವೈದ್ಯಕೀಯ ವರದಿಗಳು, ಡಿಜಿಟಲ್ ದಾಖಲೆಗಳು ಹಾಗೂ ಪ್ರತ್ಯಕ್ಷ ಮತ್ತು ಇತರ ಸಾಕ್ಷ್ಯಗಳು ಅಪರಾಧ ಸಾಬೀತುಪಡಿಸಲು ನೆರವಾದವು ಎಂದರು. ಘಟನೆಯ ಬಳಿಕ ಆರೋಪಿಯು ಆಟೋ ಚಾಲಕನ ಬಳಿ ಕೃತ್ಯದ ಬಗ್ಗೆ ಹೇಳಿಕೊಂಡಿದ್ದ ಸಂಗತಿಯೂ ಪ್ರಮುಖ ಸಾಕ್ಷ್ಯವಾಯಿತು. ಈ ಮಾಹಿತಿಯ ಆಧಾರದಲ್ಲಿ ಪೊಲೀಸರು 24 ಗಂಟೆಗಳೊಳಗೆ ಆರೋಪಿಯನ್ನು ಬಂಧಿಸಿದ್ದರು ಎಂದು ವಿವರಿಸಿದರು.

**ಒಂದು ವರ್ಷದಲ್ಲಿ ವಿಚಾರಣೆ ಪೂರ್ಣ:** ಪ್ರಕರಣದಲ್ಲಿ ಪೊಲೀಸರು ಸಂಗ್ರಹಿಸಿದ ಸಾಕ್ಷ್ಯಗಳು ಹಾಗೂ ವೈದ್ಯಕೀಯ ದಾಖಲೆಗಳ ಆಧಾರದಲ್ಲಿ ನ್ಯಾಯಾಲಯ ವಿಚಾರಣೆ ನಡೆಸಿತು. ಅಪರಾಧಿ ತನ್ನ ಮೇಲಿನ ಆರೋಪಗಳನ್ನು ನಿರಾಕರಿಸಿದ್ದರೂ, ಕೃತ್ಯಕ್ಕೆ ಬಳಸಿದ್ದ ಚಾಕು ಸೇರಿದಂತೆ ಪ್ರಮುಖ ವಸ್ತುಗಳನ್ನು ಪೊಲೀಸರು ವಶಪಡಿಸಿಕೊಂಡು ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಅತ್ಯಾಚಾರ, ಕೊಲೆ ಮತ್ತು ಸಾಕ್ಷ್ಯ ನಾಶಕ್ಕೆ ಸಂಬಂಧಿಸಿದ ಆರೋಪಗಳ ಹಿನ್ನೆಲೆಯಲ್ಲಿ ನ್ಯಾಯಾಲಯ ಮರಣದಂಡನೆ ವಿಧಿಸಿದೆ ಎಂದು ಜಯಂತಿ ತಿಳಿಸಿದರು.

**ಕುಟುಂಬಕ್ಕೆ ಪರಿಹಾರ ನೀಡಲು ಸೂಚನೆ**ಬಾಲಕಿಯ ಕುಟುಂಬಕ್ಕೆ ಪರಿಹಾರ ನೀಡುವಂತೆಯೂ ನ್ಯಾಯಾಲಯ ಸೂಚಿಸಿದೆ ಎಂದು ಅವರು ಹೇಳಿದರು. ಮಗುವನ್ನು ಮರಳಿ ತರಲು ಸಾಧ್ಯವಿಲ್ಲವಾದರೂ, ಕುಟುಂಬಕ್ಕೆ ನ್ಯಾಯ ದೊರಕಿಸಿಕೊಟ್ಟ ತೃಪ್ತಿ ಇದೆ. ಇಂತಹ ಅಪರಾಧಗಳಲ್ಲಿ ವೈಜ್ಞಾನಿಕ ತನಿಖೆ, ಡಿಜಿಟಲ್ ಸಾಕ್ಷ್ಯಗಳ ಸಂಗ್ರಹ ಮತ್ತು ಸಾಕ್ಷಿಗಳ ಹೇಳಿಕೆಗಳು ಎಷ್ಟು ಮಹತ್ವದ್ದಾಗಿವೆ ಎಂಬುದನ್ನು ಈ ಪ್ರಕರಣ ತೋರಿಸಿದೆ. ಇಂತಹ ತೀರ್ಪುಗಳು ಅಪರಾಧ ಎಸಗುವವರಿಗೆ ಎಚ್ಚರಿಕೆಯ ಸಂದೇಶವಾಗಲಿವೆ ಎಂದು ಅವರು ಅಭಿಪ್ರಾಯಪಟ್ಟರು.



ವಿ ಶಿ ಷ್ಟ
www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

**ಸನಿ ವಾಹಿನಿ**

ನಮ್ಮ ಮಾತು ಮತ್ತು ಆಲೋಚನೆಗಳು ನಾವು ಇತರರಿಗಿಂತ ಹೇಗೆ ಭಿನ್ನ ಎಂಬುದನ್ನು ತೋರಿಸುತ್ತವೆ.

**ದಿನ ಪಂಚಾಂಗ**

ಅಕ್ಟೋಬರ್, 18–2026, ಭಾನವಾರ ಶರದ್ ಋತು,
ಆಶ್ವಯುಜ ಮಾಸ, ಶುದ್ಧ ಪಕ್ಷ
ಅಷ್ಟಮಿ ತಿಥಿ ದಿನಪೂರ್ತಿ
ಪೂರ್ವಾಷಾಢ ನಕ್ಷತ್ರ ಬೆ.11:08
ರಾಹುಕಾಲ ಸಾ 4:30–5:59
ದುರ್ಗಾಷ್ಟಮಿ, ಜೀವದಯಾಷ್ಟಮಿ, ಅನಧ್ಯಯನ ಧ್ವಯ, ತಲಕಾವೇರಿ ತೀರ್ಥೋದ್ಭವ, ಶಿವಪುರ ಜಾತ್ರೆ, ಕುಕನೂರು ರಥ, ಬೆಂ.ಹೊಸಕೆರೆಹಳ್ಳಿ ದುರ್ಗಾಹೋಮ, ಚಿಂತಾಮಣಿ।ಕೈವಾರ ದುರ್ಗಾಜಯಂತಿ, ಬೆಂ.ಬಳೇಪೇಟೆ / ಟಿ.ದಾಸರಹಳ್ಳಿ ಅಂಬಾಭವಾನಿ ಪೂಜೆ

# "ಪ್ರಜಾಪ್ರಭುತ್ವ, ಸಂವಿಧಾನದ ಮೌಲ್ಯಗಳನ್ನು ರಕ್ಷಿಸಿ"




ಬೆಂಗಳೂರಿನ ಜ್ಞಾನ ಜ್ಯೋತಿ ಆಡಿಟೋರಿಯಂ ನಲ್ಲಿ ಶನಿವಾರ ನಡೆದ ರಾಷ್ಟ್ರೀಯ ಕಾನೂನು ಶಾಲೆ ಭಾರತೀಯ ವಿಶ್ವವಿದ್ಯಾಲಯ 34ನೇ ಘಟಿಕೋತ್ಸವದಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಪಾಲ್ಗೊಂಡು ಮಾತನಾಡಿದರು. ಈ ಸಂದರ್ಭದಲ್ಲಿ ಕಾನೂನು ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ ಪತ್ರ ವಿತರಿಸಿದರು. ಸುಪ್ರೀಂ ಕೋರ್ಟ್‌ನ ಮುಖ್ಯನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಹಾಗೂ ಕರ್ನಾಟಕ ಹೈಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳಾದ ವಿಭು ಬಖ್ರು, ಭಾರತೀಯ ವಕೀಲ ಪರಿಷತ್ತಿನ ಅಧ್ಯಕ್ಷರ ಮನನ್ ಕುಮಾರ್ ಮಿಶ್ರಾ, ರಂಗಶಂಕರದ ಸಹಸಂಸ್ಥಾಪಕಿ, ನಟಿ ಅರುಂಧತಿ ನಾಗ್, ರಾಷ್ಟ್ರೀಯ ಕಾನೂನು ಶಾಲೆಯ ಕುಲಪತಿ ಪ್ರೊ.ಸುಧೀರ್ ಕೃಷ್ಣಸ್ವಾಮಿ, ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಇನ್ನಿತರರು ಉಪಸ್ಥಿತರಿದ್ದರು.

● ವಿಕ್ರಮ ವಾಹಿನಿ । ಬೆಂಗಳೂರು

ಪ್ರಜಾಪ್ರಭುತ್ವ ಸಂಸ್ಥೆಗಳನ್ನು ರಕ್ಷಿಸಿ, ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿಯುವ ಜವಾಬ್ದಾರಿ ಯುವ ವಕೀಲರ ಮೇಲಿದೆ. ಸರ್ಕಾರವನ್ನು ಪ್ರಶ್ನಿಸುವ ಸ್ವಾತಂತ್ರ್ಯವೇ ಸಶಕ್ತ ಪ್ರಜಾಪ್ರಭುತ್ವದ ಲಕ್ಷಣವಾಗಿದ್ದು, ಪ್ರಶ್ನಿಸುವುದನ್ನು ಎಂದಿಗೂ ನಿಲ್ಲಿಸಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದರು.

ನಗರದ ಜ್ಞಾನಜ್ಯೋತಿ ಸಭಾಂಗಣದಲ್ಲಿ ನಡೆದ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ವಿಶ್ವವಿದ್ಯಾಲಯದ 34ನೇ ಪದವಿ ಪ್ರದಾನ ಸಮಾರಂಭ ದಲ್ಲಿ ಮಾತನಾಡಿದ ಅವರು, ಕಾನೂನು ಪದವೀಧರರು ತಮ್ಮ ಮೌಲ್ಯಗಳೊಂದಿಗೆ ರಾಜಿ ಮಾಡಿಕೊಳ್ಳದೆ, ಜನರ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ನ್ಯಾಯಕ್ಕಾಗಿ ಧ್ವನಿ ಎತ್ತಬೇಕು ಎಂದರು.

**ನ್ಯಾಯಾಂಗ ಸೇವಾ ತರಬೇತಿಗೆ ಪ್ರತ್ಯೇಕ ಸಂಸ್ಥೆ**

ಕಾನೂನು ಪದವೀಧರರಿಗೆ ನ್ಯಾಯಾಂಗ ಸೇವಾ ಪರೀಕ್ಷೆಗಳಿಗೆ ತರಬೇತಿ ನೀಡಲು ಹಾಗೂ ಯುವ ವಕೀಲರಿಗೆ ನಿರಂತರ ಶಿಕ್ಷಣ ಒದಗಿಸಲು ರಾಜ್ಯ ಸರ್ಕಾರ ಪ್ರತ್ಯೇಕ ಸಂಸ್ಥೆ ಸ್ಥಾಪಿಸಲಿದೆ. ಎನ್‌ಎಲ್‌ಎಸ್‌ಐಯುನಲ್ಲಿ ನವೋದ್ಯಮಗಳಿಗೆ ಉಚಿತ ಕಾನೂನು ಸಲಹೆ ನೀಡುವ 'ಸ್ಟಾರ್ಟ್‌ಅಪ್ ಕಾನೂನು ಚಿಕಿತ್ಸಾಲಯ' ಸ್ಥಾಪನೆಗೂ ಸರ್ಕಾರ ಬೆಂಬಲ ನೀಡಲಿದೆ ಎಂದು ತಿಳಿಸಿದರು.

ನ್ಯಾಯಾಲಯಗಳಲ್ಲಿ ಕೋಟ್ಯಂತರ ಪ್ರಕರಣಗಳು ಬಾಕಿ ಉಳಿದಿರುವುದು ಗಂಭೀರ ಸವಾಲಾಗಿದೆ. ಪ್ರತಿಯೊಂದು ಪ್ರಕರಣದ ಹಿಂದೆ ವ್ಯಕ್ತಿ ಅಥವಾ ಕುಟುಂಬದ ಬದುಕಿನ ಪ್ರಶ್ನೆಯಿರುತ್ತದೆ. ಹೀಗಾಗಿ ನ್ಯಾಯವನ್ನು ತ್ವರಿತವಾಗಿ, ಸರಳವಾಗಿ, ಕೈಗೆಟುಕುವಂತೆ ಹಾಗೂ ಎಲ್ಲರಿಗೂ ದೊರೆಯುವಂತೆ ಮಾಡುವುದು ಅಗತ್ಯ ಎಂದರು.

**ಅಭಿವೃದ್ಧಿಯ ಅಳತೆ ನ್ಯಾಯ ಮತ್ತು ಸಮಾನತೆ**

2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯಿದ್ದು, ಅಭಿವೃದ್ಧಿಯನ್ನು ಆರ್ಥಿಕ ಬೆಳವಣಿಗೆ, ಮೂಲಸೌಕರ್ಯ ಮತ್ತು ಉದ್ಯೋಗದಿಂದ ಮಾತ್ರ ಅಳೆಯಬಾರದು. ಜನರ ಘನತೆ, ಸ್ವಾತಂತ್ರ್ಯ, ಸಮಾನತೆ ಮತ್ತು ಭದ್ರತೆಯೂ ಅಭಿವೃದ್ಧಿಯ ಮಾನದಂಡಗಳಾಗಬೇಕು ಎಂದು ಹೇಳಿದರು.

## 'ಕಾನೂನು ಶಿಕ್ಷಣದ ಮೂಲಸೌಕರ್ಯ ವಿಸ್ತರಣೆಗೆ ರಾಜ್ಯ ಸರ್ಕಾರ ಬದ್ಧ'



● ವಿಕ್ರಮ ವಾಹಿನಿ । ಬೆಂಗಳೂರು

"ಕಾನೂನು ಶಿಕ್ಷಣ ಮತ್ತು ಸಾಂಸ್ಥಿಕ ಮೂಲಸೌಕರ್ಯಗಳನ್ನು ಬಲಪಡಿಸಲು ರಾಜ್ಯ ಸರ್ಕಾರ ಬದ್ಧವಾಗಿದ್ದು, ರಾಷ್ಟ್ರೀಯ ಕಾನೂನು ಶಾಲೆ (ಎನ್‌ಎಸ್‌ಎಲ್‌ಐಯು) ಕ್ಯಾಂಪಸ್ ವಿಸ್ತರಣೆಗೆ ಸಂಪೂರ್ಣ ನೆರವು ನೀಡಲಾಗುವುದು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಭರವಸೆ ನೀಡಿದರು.

ನಾಗರಭಾವಿಯಲ್ಲಿರುವ ಬೆಂಗಳೂರು ರಾಷ್ಟ್ರೀಯ ಕಾನೂನು ಶಾಲೆ ವಿಶ್ವವಿದ್ಯಾಲಯ (NLSIU) ದ ದಕ್ಷಿಣ ಬ್ಲಾಕ್, ಸಭಾಂಗಣ ಹಾಗೂ ವಿದ್ಯಾರ್ಥಿ ಕೇಂದ್ರ ನಿರ್ಮಾಣದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಅವರು ಶನಿವಾರ ಮಾತನಾಡಿದರು.

"ನ್ಯಾಷನಲ್ ಲಾ ಸ್ಕೂಲ್ ಸ್ಥಾಪನೆಯಲ್ಲಿ ಕರ್ನಾಟಕ ನೇತೃತ್ವ ವಹಿಸಿರುವುದಕ್ಕೆ ನನಗೆ



ಹೆಮ್ಮೆಯಿದೆ. ತಮ್ಮ ವಿದ್ಯಾರ್ಥಿ ನಾಯಕತ್ವದ ದಿನಗಳಲ್ಲಿ ಈ ಸಂಸ್ಥೆಯ ಪ್ರಾರಂಭವನ್ನು ದೇಶಾದ್ಯಂತ ಅಪಾರ ಉತ್ಸಾಹದೊಂದಿಗೆ ಸಂಭ್ರಮಿಸಿದ್ದೆವು. ಈ ಪ್ರತಿಷ್ಠಿತ ಸಂಸ್ಥೆಯನ್ನು ರಕ್ಷಿಸಲು ಮತ್ತು ಅಭಿವೃದ್ಧಿಪಡಿಸಲು ಸರ್ಕಾರ ಸದಾ ಸಿದ್ಧವಾಗಿದೆ" ಎಂದು ತಿಳಿಸಿದರು.

**ಜಮೀನು ಮಂಜೂರಾತಿ, ಆರ್ಥಿಕ ನೆರವಿನ ಭರವಸೆ:** "ಕ್ಯಾಂಪಸ್ ಮೂಲಸೌಕರ್ಯಗಳ ಅಗತ್ಯಗಳಿಗೆ ಭೂಮಿಯ ಕೊರತೆಯ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ. 7 ಎಕರೆ ಆಗಿರಲಿ ಅಥವಾ 10 ಎಕರೆ ಆಗಿರಲಿ, ನಿಮಗೆ ಏನು ಅಗತ್ಯವಿದೆಯೋ ಅದನ್ನು ನೀಡಲು ಸರ್ಕಾರ ಬದ್ಧವಾಗಿದೆ. ಜಮೀನು ಮಂಜೂರಾತಿ ಹಾಗೂ ಆರ್ಥಿಕ ನೆರವು ಎರಡನ್ನೂ ಒದಗಿಸಲಾಗುವುದು" ಎಂದು ಅಭಯ ನೀಡಿದರು.

ಕುಲಪತಿಗಳು ಹಾಗೂ ಅವರ ತಂಡಕ್ಕೆ ಅಭಿನಂದನೆ ಸಲ್ಲಿಸಿದ ಮುಖ್ಯಮಂತ್ರಿಗಳು, "ಸಂಸ್ಥೆಯ ಈ ಮೂಲಸೌಕರ್ಯ ವಿಸ್ತರಣೆಯು ಪ್ರಜಾಪ್ರಭುತ್ವ ಮತ್ತು ಕಾನೂನಿನ ಆಡಳಿತವನ್ನು ಎತ್ತಿಹಿಡಿಯುವ ಭವಿಷ್ಯದ ನಾಯಕರನ್ನು ರೂಪಿಸಲು ನೆರವಾಗಲಿದೆ" ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಭಾರತಕ್ಕೆ ಹೆಚ್ಚಿನ ಸಂಖ್ಯೆಯ ವಕೀಲರಷ್ಟೇ ಅಲ್ಲ, ಪ್ರಾಮಾಣಿಕತೆ, ಕರುಣೆ ಮತ್ತು ಧೈರ್ಯ ಹೊಂದಿರುವ ವಕೀಲರ ಅಗತ್ಯವಿದೆ. ರೈತರು, ಕಾರ್ಮಿಕರು, ಮಹಿಳೆಯರು ಮತ್ತು ಸಾಮಾನ್ಯ ಕುಟುಂಬಗಳು ಎದುರಿಸುವ ಸಮಸ್ಯೆಗಳನ್ನು ಅರ್ಥಮಾಡಿಕೊಂಡು, ಕಷ್ಟಕರ ಸಂದರ್ಭಗಳಲ್ಲೂ ನ್ಯಾಯದ ಪರ ನಿಲ್ಲಬೇಕು ಎಂದು ಪದವೀಧರರಿಗೆ ಕಿವಿಮಾತು ಹೇಳಿದರು.

ಡಾ. ಬಿ.ಆರ್.ಅಂಬೇಡ್ಕರ್ ಮತ್ತು ಸಂವಿಧಾನ ರಚನಾಕಾರರು ಪ್ರತಿಪಾದಿಸಿದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಹಾಗೂ ಸೌಹಾರ್ದತೆ ಭಾರತೀಯ ಪ್ರಜಾಪ್ರಭುತ್ವದ ಅಡಿಪಾಯಗಳಾಗಿವೆ. ಶಿಕ್ಷಣದ ಉದ್ದೇಶ ವೈಯಕ್ತಿಕ ಭವಿಷ್ಯ ರೂಪಿಸಿಕೊಳ್ಳುವುದಷ್ಟೇ ಅಲ್ಲ, ಇತರರ ಬದುಕನ್ನೂ ಉತ್ತಮಗೊಳಿಸುವುದಾಗಿದೆ ಎಂದರು.

ತಾವು ಕೂಡ ವಕೀಲರಾಗುವ ಆಸೆ ಹೊಂದಿದ್ದೆ. ಆದರೆ, ವಿದ್ಯಾರ್ಥಿಯಾಗಿದ್ದಾಗಲೇ ಪಕ್ಷದ ಟಿಕೆಟ್ ದೊರೆತ ಕಾರಣ ರಾಜಕೀಯಕ್ಕೆ ಪ್ರವೇಶಿಸಿ ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡೆ ಎಂದು ತಮ್ಮ ಅನುಭವ ಹಂಚಿಕೊಂಡರು.

ಸಮಾರಂಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ ಹಾಗೂ ಎನ್‌ಎಲ್‌ಎಸ್‌ಐಯು ಕುಲಾಧಿಪತಿ ನ್ಯಾಯಮೂರ್ತಿ ಸೂರ್ಯಕಾಂತ್, ಮುಖ್ಯ ಅತಿಥಿ ಅರುಂಧತಿ ನಾಗ್, ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ, ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ನ್ಯಾಯಮೂರ್ತಿಗಳು, ವಿಶ್ವವಿದ್ಯಾಲಯದ ಕುಲಪತಿ ಡಾ. ಸುಧೀರ್ ಕೃಷ್ಣಸ್ವಾಮಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

## ರಾಜಕಾರಣದಲ್ಲಿ ಧರ್ಮ ಉಳಿಯಲು ಧಾರ್ಮಿಕ ಗುರುಗಳು ಆಶೀರ್ವದಿಸಬೇಕು: ನೊಣವಿನಕೆರೆ ಶ್ರೀ



● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಧರ್ಮದಲ್ಲಿ ರಾಜಕಾರಣ ಬೆರೆಯಬಾರದು. ಆದರೆ ರಾಜಕಾರಣದಲ್ಲಿ ಧರ್ಮ ಮತ್ತು ಮೌಲ್ಯಗಳು ಉಳಿಯಲು ಧಾರ್ಮಿಕ ಗುರುಗಳು ರಾಜಕಾರಣಿಗಳಿಗೆ ಆಶೀರ್ವಾದ ನೀಡಿ, ಮಾರ್ಗದರ್ಶನ ಮಾಡಬೇಕು ಎಂದು ನೊಣವಿನಕೆರೆಯ ಕಾಡಸಿದ್ದೇಶ್ವರ ಮಠದ ಶ್ರೀ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಹೇಳಿದರು.

ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ ನಡೆಯುತ್ತಿರುವ ನವರಾತ್ರಿ ಉತ್ಸವದ ಏಳನೇ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜಕೀಯದಲ್ಲಿ ಧರ್ಮ ಉಳಿಯಬೇಕು ಎಂಬುದು ಭಗವಾನ್ ಶ್ರೀ ಸತ್ಯಸಾಯಿ ಬಾಬಾ ಅವರ ಆಶಯವಾಗಿತ್ತು. ಅದೇ ಮಾರ್ಗದಲ್ಲಿ ಸದ್ಗುರು ಶ್ರೀ ಮಧುಸೂದನ ಸಾಯಿ ಮುನ್ನಡೆಯುತ್ತಿದ್ದಾರೆ. ಜನಪ್ರತಿನಿಧಿಗಳು ಉತ್ತಮ ಕಾರ್ಯಗಳನ್ನು ಕೈಗೊಳ್ಳಲು ಧಾರ್ಮಿಕ ಗುರುಗಳು ಪ್ರೇರಣೆ ಮತ್ತು ಆಶೀರ್ವಾದ ನೀಡಬೇಕು ಎಂದರು.

ನವರಾತ್ರಿಯ ಕಾಳರಾತ್ರಿ ಆರಾಧನೆಯ ಮಹತ್ವ ವಿವರಿಸಿದ ಸದ್ಗುರು ಶ್ರೀ ಮಧುಸೂದನ ಸಾಯಿ, ಮನುಷ್ಯನ ಬದುಕಿನ ಅಜ್ಞಾನ ಮತ್ತು ಅಂಧಕಾರವನ್ನು ನಿವಾರಿಸುವ ಶಕ್ತಿ ಕಾಳರಾತ್ರಿ ದೇವಿಗಿದೆ. ಕತ್ತಲಿನಲ್ಲಿ ಭಯಗೊಂಡ ಮಗು ತಾಯಿಯನ್ನು ನೆನೆಯುವಂತೆ, ಮನುಷ್ಯರೂ ತಮ್ಮ ಸಂಕಷ್ಟಗಳಿಂದ ಹೊರಬರಲು ಜಗನ್ಮಾತೆಯ ಮೊರೆ ಹೋಗಬೇಕು ಎಂದು ಹೇಳಿದರು. ಮಕ್ಕಳ ಸಂಕಷ್ಟ ನಿವಾರಿಸಲು ಶ್ರಮಿಸುವ ತಾಯಿಯ ತ್ಯಾಗ ಮತ್ತು ಕಾಳಜಿಯನ್ನು ದೇವಿಯ ಸ್ವರೂಪದಲ್ಲಿ ಕಾಣಬಹುದು ಎಂದರು.

ವಿಧಾನ ಪರಿಷತ್ ಸದಸ್ಯೆ ಆರತಿ ಕೃಷ್ಣ ಮಾತನಾಡಿ, 'ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್' ವಿದೇಶಗಳಲ್ಲಿ ಕೈಗೊಳ್ಳುವ ಯೋಜನೆಗಳಿಗೆ ಅಗತ್ಯ ಸಹಕಾರ ನೀಡಲು ಸಿದ್ಧವಿರುವುದಾಗಿ ತಿಳಿಸಿದರು. ರೈತರ ಬದುಕು ಹಾಗೂ ಸಮಾಜದ ಜೀವನಮಟ್ಟ ಸುಧಾರಿಸಲು ಸದ್ಗುರು ಶ್ರೀ ಮಧುಸೂದನ ಸಾಯಿ ನಡೆಸುತ್ತಿರುವ ಸೇವಾಕಾರ್ಯಗಳನ್ನು ನೊಣವಿನಕೆರೆ ಶ್ರೀ ಶ್ಲಾಘಿಸಿದರು.

ಅವಧೂತ ಶ್ರೀ ವಿನಯ್ ಗುರೂಜಿ ಮಾತನಾಡಿ, ಮುದ್ದೇನಹಳ್ಳಿಯಲ್ಲಿ ಕರುಣೆ, ಪಾರದರ್ಶಕತೆ ಮತ್ತು ಮಾನವೀಯತೆಯ ಸಂಗಮವಿದೆ. ಸತ್ಯಸಾಯಿ ಸಂಸ್ಥೆ ಜೀವನದ ಉದ್ದೇಶವನ್ನು ಕಲಿಸುವ ಕೇಂದ್ರವಾಗಿದೆ. ಇಲ್ಲಿ ರಾಜಕಾರಣಿಗಳಿಗೆ ಉತ್ತಮ ಆಡಳಿತದ ಮಾರ್ಗದರ್ಶನ ನೀಡಿದರೆ, ಸನ್ಯಾಸಿಗಳಿಗೆ ಶಿಸ್ತು ಮತ್ತು ಸಂಯಮದ ಪಾಠ ಕಲಿಸಲಾಗುತ್ತಿದೆ ಎಂದರು. ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ದೂರದೃಷ್ಟಿ ಹಾಗೂ ಜ್ಞಾನ ಪ್ರಸಾರದ ಕಾರ್ಯವನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಬಿ.ಎನ್. ನರಸಿಂಹಮೂರ್ತಿ ಉಪಸ್ಥಿತರಿದ್ದರು. ಬಳಿಕ ಖ್ಯಾತ ನೃತ್ಯ ಕಲಾವಿದೆ ಸೋನಾಲ್ ಮಾನ್ ಸಿಂಗ್ ಅವರ ತಂಡದಿಂದ ವಿಶೇಷ ನೃತ್ಯ ಪ್ರದರ್ಶನ ನಡೆಯಿತು.

ನವರಾತ್ರಿ ಉತ್ಸವದ ಅಂಗವಾಗಿ ದೇವಿಯ ವಿವಿಧ ಸ್ವರೂಪಗಳ ಆರಾಧನೆ, ಧಾರ್ಮಿಕ ಪ್ರವಚನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಭಕ್ತರ ಗಮನ ಸೆಳೆದವು. ಕಾಳರಾತ್ರಿ ದೇವಿಯ ಆರಾಧನೆಯ ಮೂಲಕ ಭಯ, ಅಜ್ಞಾನ ಮತ್ತು ನಕಾರಾತ್ಮಕ ಚಿಂತನೆಗಳನ್ನು ದೂರಮಾಡಿಕೊಂಡು, ಜೀವನದಲ್ಲಿ ಧೈರ್ಯ, ಜ್ಞಾನ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂಬ ಸಂದೇಶವನ್ನು ಕಾರ್ಯಕ್ರಮದಲ್ಲಿ ಸಾರಲಾಯಿತು.

ಧರ್ಮ, ಸೇವೆ ಮತ್ತು ಮಾನವೀಯತೆಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂಬ ಆಶಯವನ್ನು ಗಣ್ಯರು ವ್ಯಕ್ತಪಡಿಸಿದರು.

## ಕಬ್ಬು ಬೆಳೆಗಾರರಿಗೆ ಕೈಲಾದ ಸಹಾಯ ಮಾಡುತ್ತೇವೆ; ಡಿ.ಕೆ. ಶಿವಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

'ಕಬ್ಬು ಬೆಳೆಗಾರರದ್ದು ರಾಷ್ಟ್ರೀಯ ಸಮಸ್ಯೆ. ಅವರ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ನಮ್ಮ ಕೈಲಾದ ಸಹಾಯವನ್ನು ಮಾಡುತ್ತೇವೆ' ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

ನಗರದ ಜ್ಞಾನ ಜ್ಯೋತಿ ಆಡಿಟೋರಿಯಂ ನಲ್ಲಿ ಶನಿವಾರ ಸಿಎಂ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು.

'ಇಂದು ಬೆಳಗಾವಿ ಹೋಗುತ್ತಿದ್ದೇನೆ. ಪ್ರತಿಭಟನೆ ಮಾಡುತ್ತಿರುವ ಕಬ್ಬು ಬೆಳೆಗಾರರೊಂದಿಗೆ ಮಾತನಾಡುತ್ತೇನೆ. ಅವರ ಸಮಸ್ಯೆಗಳನ್ನು ಆಲಿಸುತ್ತೇನೆ. ಅವರ ಅವರ ಸ್ಥಿತಿಗತಿಗಳನ್ನು ನಾವು ಅರ್ಥ ಮಾಡಿಕೊಂಡಿದ್ದೇವೆ' ಎಂದರು. ಮೈಸೂರಲ್ಲಿ ಸಿದ್ದರಾಮಯ್ಯನವರನ್ನು ಭೇಟಿ ಮಾಡಿದರ ಬಗ್ಗೆ ಪ್ರಶ್ನಿಸಿದಾಗ ಸಿಎಂ, 'ಅವರನ್ನು ಭೇಟಿ ಮಾಡಿದ್ದು ಸತ್ಯ. ಸಿದ್ದರಾಮಯ್ಯನವರು ನಮ್ಮ ನಾಯಕರು. ಅವರನ್ನು ಭೇಟಿ ಮಾಡಿ ಕುಶಲೋಪರಿ ವಿಚಾರಿಸುವುದು ನನ್ನ ಕರ್ತವ್ಯ, ಜವಾಬ್ದಾರಿ' ಎಂದು ಹೇಳಿದರು. ರೈತರ ಬೇಡಿಕೆಗಳನ್ನು ಆಲಿಸಿ, ಸಾಧ್ಯವಿರುವ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುವುದು. ಪ್ರತಿಭಟನಾನಿರತ ರೈತರೊಂದಿಗೆ ಚರ್ಚಿಸಿದ ಬಳಿಕ ಮುಂದಿನ ಕ್ರಮಗಳ ಕುರಿತು ನಿರ್ಧಾರ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

## 'ಬಾಂಬೆ ಬಾಯ್ಸ್' ಪುಸ್ತಕದಿಂದ ನಾಯಕರ ಬಣ್ಣ ಬಯಲು: ವಿಶ್ವನಾಥ್

1ನೇ ಪುಟದಿಂದ

ಎಂಬ ಲೆಕ್ಕಾಚಾರ ಕೆಲವು ರಾಜಕಾರಣಿಗಳಲ್ಲಿದೆ. ಇದೇ ಕಾರಣಕ್ಕೆ ಅವರ ವಿರುದ್ಧ ಸ್ಟಿಂಗ್ ಆಪರೇಷನ್ ಮೂಲಕ ಮಾನಹಾನಿ ಮಾಡುವ ಪ್ರಯತ್ನಗಳು ನಡೆಯುತ್ತಿವೆ ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯ ಅವರು ಎರಡು ಬಾರಿ ಮುಖ್ಯಮಂತ್ರಿಯಾಗಿರುವ ಹಿರಿಯ ರಾಜಕಾರಣಿ. ಅವರೊಂದಿಗೆ ತಮಗೂ ಹಲವು ವಿಚಾರಗಳಲ್ಲಿ ಭಿನ್ನಾಭಿಪ್ರಾಯಗಳಿವೆ. ಆದರೆ, ಆ ಭಿನ್ನಾಭಿಪ್ರಾಯಗಳಿಗೂ ವ್ಯಕ್ತಿಯ ಮಾನಹಾನಿಗೂ ಸಂಬಂಧವಿಲ್ಲ. ರಾಜಕೀಯದಲ್ಲಿ ಬೆಳೆಯುವುದು ಸುಲಭವಲ್ಲ. ಹೀಗಿರುವಾಗ ಬೆಳೆದ ನಾಯಕರನ್ನು ಈ ರೀತಿಯಲ್ಲಿ ತುಳಿಯಲು ಪ್ರಯತ್ನಿಸುವುದು ಎಷ್ಟು ಸರಿ ಎಂದು ಅವರು ಪ್ರಶ್ನಿಸಿದ್ದಾರೆ.

ಇದೇ ವೇಳೆ, ತಮ್ಮ 'ಬಾಂಬೆ ಬಾಯ್ಸ್' ಪುಸ್ತಕ ಪ್ರಕಟವಾದರೆ ರಾಜ್ಯದ ಮೂರೂ ಪ್ರಮುಖ ರಾಜಕೀಯ ಪಕ್ಷಗಳ ಹಿರಿಯ ನಾಯಕರು ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಎಲ್ಲರೂ ಗಾಜಿನ ಮನೆಯಲ್ಲೇ ಕುಳಿತಿದ್ದಾರೆ. ಸಾರ್ವಜನಿಕರಿಗೆ ರಾಜಕೀಯದ ಒಳಸುಳಿಗಳು ಅರ್ಥವಾಗುತ್ತವೆ, ಜನರನ್ನು ದಡ್ಡರೆಂದು ಭಾವಿಸಬಾರದು ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು ತಲೆತಗ್ಗಿಸುವಂತಿವೆ ಎಂದಿರುವ ಅವರು, ಸ್ಟಿಂಗ್ ಆಪರೇಷನ್‌ಗಳ ಮೂಲಕ ವಿರೋಧ ಪಕ್ಷದವರು ಮತ್ತು ಸ್ವಪಕ್ಷದವರೇ ಪರಸ್ಪರ ಕೆಸರೆರಚಾಟದಲ್ಲಿ ತೊಡಗಿರುವುದು ಅವಮಾನಕರ ಸಂಗತಿ ಎಂದು ಟೀಕಿಸಿದ್ದಾರೆ.

ತಾನೂ ರಾಜಕೀಯ ವ್ಯವಸ್ಥೆಯ ಭಾಗವಾಗಿದ್ದವನು ಎಂಬುದನ್ನು ಒಪ್ಪಿಕೊಂಡಿರುವ ವಿಶ್ವನಾಥ್, ಕ್ಷುಲ್ಲಕ ವಿಚಾರಗಳನ್ನು ರಾಜಕೀಯಕ್ಕೆ ಎಳೆದು ತಂದು ಸಮಾಜದ ವಾತಾವರಣವನ್ನು ಹಾಳು ಮಾಡುವುದು ಬೇಡ ಎಂಬ ಕಾರಣಕ್ಕೆ ಇಷ್ಟು ದಿನ ಮೌನವಾಗಿದ್ದೆ ಎಂದು ತಿಳಿಸಿದ್ದಾರೆ.

ಒಟ್ಟಿನಲ್ಲಿ, ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಆಪರೇಷನ್ ಕುರಿತು ವಿಶ್ವನಾಥ್ ನೀಡಿರುವ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ನಾಂದಿ ಹಾಡಿದೆ. ಸ್ಟಿಂಗ್ ಆಪರೇಷನ್ ಹಿಂದಿನ ಉದ್ದೇಶ ಮತ್ತು 'ಬಾಂಬೆ ಬಾಯ್ಸ್' ಪುಸ್ತಕದಲ್ಲಿ ಏನಿರಬಹುದು ಎಂಬ ಕುತೂಹಲವೂ ಹೆಚ್ಚು ಹರಿದಾಡುತ್ತಿದೆ.

## ಮಕ್ಕಳ ಇಂಟರ್ನೆಟ್ ಹಕ್ಕು ಎತ್ತಿಹಿಡಿದ ಸುಪ್ರೀಂ ಕೋರ್ಟ್

1ನೇ ಪುಟದಿಂದ

ಅಕ್ಟೋಬರ್ 15ರಂದು ನ್ಯಾಯಮೂರ್ತಿಗಳಾದ ಜೆ.ಬಿ. ಪರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರ ಪೀಠ, ಸಂವಿಧಾನದ 19(1) (ಎ) ಮತ್ತು 21ನೇ ವಿಧಿಗಳಡಿ ದೊರೆಯುವ ಅಭಿವ್ಯಕ್ತಿ ಸ್ವಾತಂತ್ರ್ಯ ಹಾಗೂ ವೈಯಕ್ತಿಕ ಸ್ವಾತಂತ್ರ್ಯದ ಹಕ್ಕುಗಳು ಮಕ್ಕಳಿಗೂ ಅನ್ವಯಿಸುತ್ತವೆ ಎಂದು ತಿಳಿಸಿತು. ಮಕ್ಕಳಿಗೆ ಇಂಟರ್ನೆಟ್ ಬಳಕೆಯನ್ನು ಸಂಪೂರ್ಣವಾಗಿ ನಿರಾಕರಿಸುವ ಬದಲು, ಅವರ ಹಕ್ಕುಗಳಿಗೆ ಧಕ್ಕೆಯಾಗದಂತೆ ಸುರಕ್ಷತೆ ಖಚಿತಪಡಿಸಬೇಕು ಎಂದು ಅಭಿಪ್ರಾಯಪಟ್ಟಿತು.

**ಅಕ್ರಮ ವಿಷಯಗಳ ವಿರುದ್ಧ ಕಠಿಣ ಕ್ರಮ**

ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಟೆಲಿಗ್ರಾಮ್ ಮತ್ತು ಯೂಟ್ಯೂಬ್‌ನಂತಹ ವೇದಿಕೆಗಳಲ್ಲಿ ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ವಿಷಯಗಳು ಹರಿದಾಡುವುದನ್ನು ನ್ಯಾಯಾಲಯ ಗಂಭೀರವಾಗಿ ಪರಿಗಣಿಸಿದೆ. ಇಂತಹ ಕಾನೂನುಬಾಹಿರ ವಿಷಯಗಳನ್ನು ಪತ್ತೆಹಚ್ಚಿ ತಕ್ಷಣ ತೆಗೆದುಹಾಕಲು ಕೇಂದ್ರ ಸರ್ಕಾರವು ಸಾಮಾಜಿಕ ಮಾಧ್ಯಮ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಬೇಕು. ಪೇವಾಲ್ ಅಥವಾ ಚಂದಾದಾರಿಕೆಯ ಮೂಲಕವೂ ಇಂತಹ ವಿಷಯಗಳು ಲಭ್ಯವಾಗದಂತೆ ನೋಡಿಕೊಳ್ಳುವುದು ಮಧ್ಯವರ್ತಿ ಸಂಸ್ಥೆಗಳ ಜವಾಬ್ದಾರಿ ಎಂದು ಪೀಠ ಹೇಳಿದೆ.

**ನಿಯಮ ಉಲ್ಲಂಘಿಸಿದರೆ ಭಾರಿ ದಂಡ**

ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ಅಕ್ರಮ ವಿಷಯಗಳ ವಿರುದ್ಧ ಕ್ರಮ ಕೈಗೊಳ್ಳದ ಸಂಸ್ಥೆಗಳಿಗೆ ಭಾರಿ ದಂಡ ವಿಧಿಸುವ ಚೌಕಟ್ಟು ರೂಪಿಸುವಂತೆ ಕೇಂದ್ರ ಸರ್ಕಾರಕ್ಕೆ ಸೂಚಿಸಲಾಗಿದೆ. ಉಲ್ಲಂಘನೆಯ ಗಂಭೀರತೆ, ಅವಧಿ, ಪುನರಾವರ್ತನೆ ಹಾಗೂ ಸಂಸ್ಥೆಯ ಗಾತ್ರ ಮತ್ತು ವಹಿವಾಟನ್ನು ದಂಡ ನಿರ್ಧರಿಸುವಾಗ ಪರಿಗಣಿಸಬೇಕು ಎಂದು ನ್ಯಾಯಾಲಯ ತಿಳಿಸಿದೆ.

ಇಂತಹ ವಿಷಯಗಳ ಕುರಿತು ದೂರು ಬಂದಾಗ 24 ಗಂಟೆಗಳೊಳಗೆ ಅದನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ವ್ಯವಸ್ಥೆ ರೂಪಿಸುವಂತೆಯೂ ನಿರ್ದೇಶಿಸಲಾಗಿದೆ. ನಿರ್ದೇಶನಗಳ ಅನುಷ್ಠಾನದ ಪ್ರಗತಿ ಕುರಿತು ಅಫಿಡವಿಟ್ ಸಲ್ಲಿಸಲು ಕೇಂದ್ರ ಸರ್ಕಾರಕ್ಕೆ 2026ರ ಡಿಸೆಂಬರ್ 10ರವರೆಗೆ ಕಾಲಾವಕಾಶ ನೀಡಲಾಗಿದೆ.

## ಗಾನ ಸಂಗೀತದ ರೂವಾರಿ ದೇವ ಇನ್ನಿಲ್ಲ

1ನೇ ಪುಟದಿಂದ

ಅವರ ನಿಧನಕ್ಕೆ ಚಿತ್ರರಂಗದ ಗಣ್ಯರು ಸಂತಾಪ ಸೂಚಿಸಿದ್ದಾರೆ.

1950ರ ನವೆಂಬರ್ 20ರಂದು ಜನಿಸಿದ ದೇವ, 1986ರಲ್ಲಿ 'ಮಾಟುಕಾರ ಮನ್ನಾರು' ಚಿತ್ರದ ಮೂಲಕ ಸಂಗೀತ ಕ್ಷೇತ್ರಕ್ಕೆ ಪ್ರವೇಶಿಸಿದರು. ತಮಿಳು, ತೆಲುಗು, ಮಲಯಾಳಂ ಹಾಗೂ ಕನ್ನಡ ಸೇರಿದಂತೆ ಹಲವು ಭಾಷೆಗಳ 400ಕ್ಕೂ ಹೆಚ್ಚು ಚಿತ್ರಗಳಿಗೆ ಸಂಗೀತ ಸಂಯೋಜಿಸಿದ್ದರು. ರಜನಿಕಾಂತ್ ಅಭಿನಯದ 'ಬಾಷಾ', 'ಅಣ್ಣಾಮಲೈ' ಮತ್ತು 'ಅರುಣಾಚಲಂ' ಚಿತ್ರಗಳ ಸಂಗೀತದ ಮೂಲಕ ಅಪಾರ ಜನಪ್ರಿಯತೆ ಗಳಿಸಿದ್ದರು. ಅವರ ಕೊಡುಗೆಗೆ ತಮಿಳುನಾಡು ಸರ್ಕಾರದ 'ಕಲೈಮಾಮಣಿ' ಪ್ರಶಸ್ತಿ ಸೇರಿದಂತೆ ಹಲವು ಗೌರವಗಳು ಸಂದಿದ್ದವು.

**ಗಾನ ಸಂಗೀತಕ್ಕೆ ವಿಶಿಷ್ಟ ಗುರುತು:** ಇಳಯರಾಜ ಮತ್ತು ಎ.ಆರ್. ರೆಹಮಾನ್ ಅವರಂತಹ ದಿಗ್ಗಜರು ಪ್ರಾಬಲ್ಯ ಹೊಂದಿದ್ದ ಸಂದರ್ಭದಲ್ಲಿ, ಚಿತ್ರರಂಗದಲ್ಲಿ ತಮ್ಮದೇ ಆದ ಗುರುತು ಮೂಡಿಸಲು ದೇವ 'ಗಾನ' ಸಂಗೀತದತ್ತ ಮುಖ ಮಾಡಿದರು. ಈ ವಿಶಿಷ್ಟ ಶೈಲಿಯನ್ನು ಜನಪ್ರಿಯ ಚಿತ್ರಗೀತೆಗಳಲ್ಲಿ ಅಳವಡಿಸುವ ಮೂಲಕ ಪ್ರೇಕ್ಷಕರ ಗಮನ ಸೆಳೆದರು. ತಮ್ಮ ಗಂಭೀರ ಕಂಠಸಿರಿಯಿಂದಲೂ ಗುರುತಿಸಿಕೊಂಡಿದ್ದ ಅವರು, ಹಲವು ಗಾನ ಹಾಡುಗಳಿಗೆ ಸಂಗೀತ ಸಂಯೋಜಿಸುವುದರ ಜತೆಗೆ ಸ್ವತಃ ಗಾಯನವನ್ನೂ ಮಾಡಿದ್ದರು.

ಇತ್ತೀಚೆಗೆ 'ಮೀಸಯ ಮುರುಕ್ಕು 2' ಚಿತ್ರದ ಯಶಸ್ಸಿನ ಸಮಾರಂಭದಲ್ಲಿ ಮಾತನಾಡಿದ್ದ ದೇವ, ಚಿತ್ರರಂಗದಲ್ಲಿ ವಿಶಿಷ್ಟ ಗುರುತು ಪಡೆಯುವ ಉದ್ದೇಶದಿಂದ ಗಾನ ಹಾಡುಗಳನ್ನು ಪರಿಚಯಿಸಿದ್ದಾಗಿ ಹೇಳಿಕೊಂಡಿದ್ದರು. ಅವರ ನಿಧನದಿಂದ ದಕ್ಷಿಣ ಭಾರತದ ಚಿತ್ರಸಂಗೀತ ಕ್ಷೇತ್ರ ಒಬ್ಬ ವಿಶಿಷ್ಟ ಪ್ರತಿಭೆಯನ್ನು ಕಳೆದುಕೊಂಡಿದೆ.

ಸಂಗೀತ ನಿರ್ದೇಶಕರಾಗಿ ಮಾತ್ರವಲ್ಲದೆ, ಗಾಯಕರಾಗಿಯೂ ಗುರುತಿಸಿಕೊಂಡಿದ್ದ ದೇವ, ತಮ್ಮ ವಿಶಿಷ್ಟ ಧ್ವನಿ ಮತ್ತು ಲಯಬದ್ಧ ಹಾಡುಗಳ ಮೂಲಕ ಅಭಿಮಾನಿಗಳ ಮನಸ್ಸಿನಲ್ಲಿ ಸ್ಥಾನ ಪಡೆದಿದ್ದರು. ಹಲವು ದಶಕಗಳ ಕಾಲ ಚಿತ್ರರಂಗದಲ್ಲಿ ಸಕ್ರಿಯರಾಗಿದ್ದ ಅವರು, ತಮ್ಮದೇ ಆದ ಸಂಗೀತ ಶೈಲಿಯನ್ನು ರೂಪಿಸಿಕೊಂಡು ಅಪಾರ ಅಭಿಮಾನಿಗಳನ್ನು ಗಳಿಸಿದ್ದರು. ಅವರ ನಿಧನಕ್ಕೆ ಅಭಿಮಾನಿಗಳು ಹಾಗೂ ಸಂಗೀತಾಸಕ್ತರು ಕಂಬನಿ ಮಿಡಿದಿದ್ದಾರೆ.

## ಎಸ್‌ಜೆ ಸರ್ಕಾರಿ ಪಾಲಿಟೆಕ್ನಿಕ್ ಮೆಷಿನ್ ಶಾಪ್‌ಗೆ ಹೊಸ ಮೆರಗು

● ವಿಕ್ರಮ ವಾಹಿನಿ । ಬೆಂಗಳೂರು

ಕೆ.ಆರ್. ವೃತ್ತದಲ್ಲಿರುವ ಖಏ ಸರ್ಕಾರಿ ಪಾಲಿಟೆಕ್ನಿಕ್ ನಲ್ಲಿ ಮತ್ತೊಂದು ವಿಶೇಷ ದಿನ. 1992ನೇ ಬ್ಯಾಚ್ ನ ಹಳೆಯ ವಿದ್ಯಾರ್ಥಿಗಳು ತಮ್ಮ ಸಂಸ್ಥೆಯಾದ ಂಃಖ ಜನರಲ್ ಸಲ್ಯೂಷನ್ಸ್ ಇಂಡಿಯಾ ಪ್ರೈ. ಲಿ. ಮೂಲಕ ತಮ್ಮ ಮಾತೃ ಸಂಸ್ಥೆಗೆ ಕೊಡುಗೆ ನೀಡಲು ಮುಂದೆ ಬಂದಿದ್ದಾರೆ.

ಸುಮಾರು 30 ವರ್ಷಗಳ ಹಿಂದೆ ಇದೇ ಬ್ಯಾಚ್ ನ ಮೂವರು ಯುವ ಇಂಜಿನಿಯರ್ ಗಳಾದ ವಿಲಾಯತ್ ಅಲಿ, ಬಾಲಕೃಷ್ಣ ಮತ್ತು ವಿನೋದ್ ಸಾಲಾಡಿ ಅವರು ಪ್ರಾರಂಭಿಸಿದ ಈ ಕಂಪನಿ, ಇಂದು ಕಾಲೇಜಿನ ಮೆಷಿನ್ ಶಾಪ್ ನ ಸಂಪೂರ್ಣ ನವೀಕರಣ ಮಾಡಿ ಕೊಡುಗೆಯಾಗಿ ನೀಡಿದೆ.

ಈ ನವೀಕರಣದಲ್ಲಿ ಯಂತ್ರಗಳ ಸಂಪೂರ್ಣ ದುರಸ್ತಿ ಮತ್ತು ಸರ್ವಿಸ್, ಬಾಗಿಲು–ಕಿಟಕಿಗಳ ದುರಸ್ತಿ, ಸಿವಿಲ್ ಕಾಮಗಾರಿ, ಗೋಡೆ ಮತ್ತು ನೆಲಕ್ಕೆ ಹೊಸ ಬಣ್ಣ ಬಳಿಯುವುದು ಸೇರಿದ್ದು, ವಿದ್ಯಾರ್ಥಿಗಳು ಆಧುನಿಕ ಮತ್ತು ಸುರಕ್ಷಿತ ವಾತಾವರಣದಲ್ಲಿ ಪ್ರಾಯೋಗಿಕ ಕಲಿಕೆ ಪಡೆಯಲು ಅನುಕೂಲವಾಗಿದೆ.

ಈ ಶ್ಲಾಘನೀಯ ಕಾರ್ಯದಲ್ಲಿ ಮತ್ತಿಬ್ಬರು ಹಳೆಯ ವಿದ್ಯಾರ್ಥಿಗಳಾದ ರಾಜೇಶ್ ಎಂ.ಎಸ್ ಮತ್ತು ರಘುನಂದನ್ ಸಹ ಕೈಜೋಡಿಸಿ ಮೆಷಿನ್ ಶಾಪ್ ಗೆ ಆಧುನಿಕ ರೂಪ ನೀಡಿದ್ದಾರೆ.



ನವೀಕರಿಸಿದ ಮೆಷಿನ್ ಶಾಪ್ ನ್ನು ಪ್ರಾಂಶುಪಾಲರಾದ ಪ್ರಸನ್ನ, ಹೆಚ್.ಆರ್, ವಿಭಾಗ ಮುಖ್ಯಸ್ಥರು, ಉಪನ್ಯಾಸಕರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳ ಸಮ್ಮುಖದಲ್ಲಿ ಉದ್ಘಾಟಿಸಲಾಯಿತು.

ಈ ಪರಿವರ್ತನೆಯನ್ನು ಕಂಡ ವಿದ್ಯಾರ್ಥಿಗಳು ಹಳೆಯ ವಿದ್ಯಾರ್ಥಿಗಳಿಗೆ, ವಿಶೇಷವಾಗಿ ಂಃಖ ಕಂಪನಿಯ ಸಂಸ್ಥಾಪಕರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.ಪ್ರತಿ ವರ್ಷ ಸಂಸ್ಥೆಯ ಸರ್ವತೋಮುಖ ಅಭಿವೃದ್ಧಿಗಾಗಿ ಇಂತಹ ವಿಶೇಷ ಕೊಡುಗೆಗಳನ್ನು ನೀಡುತ್ತಿರುವುದು ಎಲ್ಲರಿಗೂ ಮಾದರಿಯಾಗಿದೆ.

PRGI NO: KARKAN/2018/78481

# ‘ಮೇಕೆದಾಟು ಯೋಜನೆಗೆ ಮುಂದಿನ ಬಜೆಟ್‌ನಲ್ಲಿ ಅನುದಾನ’

## ■ ಕಾವೇರಿ ಉಳಿದರೆ ಕರುನಾಡು ಉಳಿಯುತ್ತದೆ । ಜಲಾಶಯಗಳ ಹೂಳು ತೆಗೆಯಲು ಕ್ರಮ ■

● ವಿಕ್ರಮ ವಾಹಿನಿ । ಶ್ರೀರಂಗಪಟ್ಟಣ

ಮೇಕೆದಾಟು ಅಣೆಕಟ್ಟು ಯೋಜನೆಗೆ ಮುಂದಿನ ಬಜೆಟ್‌ನಲ್ಲಿ ಸೂಕ್ತ ಅನುದಾನ ಮೀಸಲಿಡಲಾಗುವುದು. ಯೋಜನೆಗೆ ಅಗತ್ಯವಿರುವ ಅರಣ್ಯ ಭೂಮಿಗೆ ಪರ್ಯಾಯವಾಗಿ 5,000 ಹೆಕ್ಟೇರ್ ಭೂಮಿ ಒದಗಿಸುವ ಸಂಬಂಧ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಕೆಆರ್‌ಎಸ್ ಅಣೆಕಟ್ಟಿನ ಬೃಂದಾವನ ಉದ್ಯಾನದಲ್ಲಿ ಶುಕ್ರವಾರ ನಡೆದ ಎರಡನೇ ವರ್ಷದ ಕಾವೇರಿ ಆರತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೇಕೆದಾಟು ಯೋಜನೆಗೆ ಭೂಮಿಪೂಜೆ ನೆರವೇರಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದರು.

**ಕಾವೇರಿ ನಮ್ಮ ಬದುಕಿನ ಶಕ್ತಿ:** ಕಾವೇರಿ ನಮ್ಮ ಸಂಸ್ಕೃತಿ, ಪ್ರಕೃತಿ ಮತ್ತು ಬದುಕಿನ ಶಕ್ತಿ. ತಾಯಿ ಜನ್ಮ ನೀಡಿದರೆ ಕಾವೇರಿ ಅನ್ನ ನೀಡುತ್ತಾಳೆ. ಕಾವೇರಿ ಉಳಿದರೆ ಕರುನಾಡು ಉಳಿಯುತ್ತದೆ. ಜಲ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ನದಿಯ ಉಪಕಾರವನ್ನು ಸ್ಮರಿಸುವ ಉದ್ದೇಶದಿಂದ ಕಾವೇರಿ ಆರತಿ ಆರಂಭಿಸಲಾಗಿದೆ ಎಂದು ಹೇಳಿದರು.

ಚಾಮುಂಡೇಶ್ವರಿ ಶಕ್ತಿಯ ಸಂಕೇತವಾದರೆ, ಕಾವೇರಿ ಸಮೃದ್ಧಿಯ ಸಂಕೇತ. ಕಾವೇರಿ ಹುಟ್ಟಿ ಸಮುದ್ರ ಸೇರುವವರೆಗೆ ಲಕ್ಷಾಂತರ ಜನರು, ನಗರಗಳು ಮತ್ತು ಉದ್ಯಮಗಳಿಗೆ ಜೀವಜಲ ಒದಗಿಸುತ್ತಾಳೆ. ಕಾವೇರಿ ಜಲಾನಯನ ಪ್ರದೇಶದಲ್ಲಿ ಸುಮಾರು 3.87 ಕೋಟಿ ಜನರ ಬದುಕು




ನದಿಯನ್ನು ಅವಲಂಬಿಸಿದೆ. ಈ ಪರಂಪರೆಯನ್ನು ಮುಂದಿನ ಪೀಳಿಗೆಗೂ ಉಳಿಸಿ ಬೆಳೆಸಬೇಕು ಎಂದರು.

**ಜಲಾಶಯಗಳ ಹೂಳು ತೆಗೆಯಲು ಕ್ರಮ**

ಕಾವೇರಿ ಮತ್ತು ತುಂಗಭದ್ರಾ ಜಲಾಶಯಗಳ ಹೂಳು ತೆಗೆಯುವ ಕುರಿತು ಕೇಂದ್ರ ಜಲಶಕ್ತಿ ಸಚಿವರೊಂದಿಗೆ ಚರ್ಚಿಸಲಾಗಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಹೂಳು ತೆಗೆಯುವ ಕಾರ್ಯ ಆರಂಭವಾಗಿದ್ದು, ಅಲ್ಲಿನ ಕಾರ್ಯವಿಧಾನವನ್ನು ಅಧ್ಯಯನ ಮಾಡಲು ತಾವು ಹಾಗೂ ನೀರಾವರಿ ಸಚಿವರು ತೆಲಂಗಾಣಕ್ಕೆ ಭೇಟಿ ನೀಡಲಿದ್ದೇವೆ.

ಯಂತ್ರಗಳ ಮೂಲಕ ಹೂಳು ತೆಗೆದು, ಮರಳು ಮತ್ತು ಮಣ್ಣನ್ನು ರೈತರಿಗೆ ಉಪಯೋಗವಾಗುವಂತೆ ಒದಗಿಸುವ ಯೋಜನೆಯಿದೆ ಎಂದು ತಿಳಿಸಿದರು.

ಕನ್ನಂಬಾಡಿ ಅಣೆಕಟ್ಟು ಕೃಷಿ ಮತ್ತು ಜನಜೀವನಕ್ಕೆ ಮಹತ್ವದ ಆಧಾರವಾಗಿದೆ. ನೀರಿನ ಸದ್ಬಳಕೆ ಹಾಗೂ ಸಂರಕ್ಷಣೆಗೆ ಸರ್ಕಾರ ಆದ್ಯತೆ ನೀಡಲಿದೆ. ಕಾವೇರಿ ನೀರು ಬೆಂಗಳೂರಿನ ಕುಡಿಯುವ ನೀರಿನ ಅಗತ್ಯವನ್ನೂ ಪೂರೈಸುತ್ತಿದ್ದು, ಕೊನೆಯ ಹಂತದ ರೈತನಿಗೂ ನೀರು ತಲುಪಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

### ಟೀಕೆಗಳಿಗೆ ಹೆದರುವುದಿಲ್ಲ

ಕಾವೇರಿ ಆರತಿ ಕಾರ್ಯಕ್ರಮ ಆರಂಭಿಸಿದಾಗ ಟೀಕೆಗಳು ವ್ಯಕ್ತವಾಗಿದ್ದವು. ಟೀಕೆಗಳನ್ನು ಸ್ವಾಗತಿಸುವುದಾಗಿ ಹೇಳಿದ ಶಿವಕುಮಾರ್, “ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ” ಎಂಬ ನಂಬಿಕೆ ನನ್ನದು. ಎಷ್ಟು ಉಳಿ ಏಟು ಬಿದ್ದರೂ ಬಂಡೆ ಜಗ್ಗುವುದಿಲ್ಲ. ರಾಜ್ಯದ ಜನರ ಸೇವೆ ಮಾಡಲು ಸಂಕಲ್ಪ ಮಾಡಿದ್ದೇನೆ ಎಂದು ಹೇಳಿದರು.

ಮೇಕೆದಾಟು ಯೋಜನೆಗಾಗಿ ಪಾದಯಾತ್ರೆ ನಡೆಸಿದಾಗ ಅನೇಕರು ಯೋಜನೆ ಸಾಕಾರವಾಗುವ ಬಗ್ಗೆ ಪ್ರಶ್ನಿಸಿದ್ದರು. ಈಗ ಯೋಜನೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಿಂದ ಅನುಮತಿ ದೊರೆತಿದೆ ಎಂದು ಅವರು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಮೂಲಕ ಜನರ ಬದುಕಿನಲ್ಲಿ ಬದಲಾವಣೆ ತರಲು ಸರ್ಕಾರ ಪ್ರಯತ್ನಿಸಿದೆ. ರಾಜ್ಯದ ಅಭಿವೃದ್ಧಿಯನ್ನು ವಿರೋಧಿಸುವವರಿಗೆ ಕಾವೇರಿ ತಾಯಿ ಸದ್ಬುದ್ಧಿ ನೀಡಲಿ ಎಂದು ಹಾರೈಸಿದರು.

# ಸೌಮ್ಯಾ ರೆಡ್ಡಿ ರಾಜೀನಾಮೆ

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಸೌಮ್ಯಾ ರೆಡ್ಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಕಳೆದ ಎರಡು ವರ್ಷಗಳಿಂದ ಈ ಜವಾಬ್ದಾರಿ ನಿರ್ವಹಿಸುತ್ತಿದ್ದ ಅವರು, 2026ರ ಆಗಸ್ಟ್ 20ರಂದು ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ರಾಜೀನಾಮೆ ಪತ್ರ ರವಾನಿಸಿದ್ದಾರೆ ಎಂದು ವರದಿಯಾಗಿದೆ.



ರಾಜ್ಯ ಸಚಿವ ಸಂಪುಟದಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ಸಿಗದಿರುವ ಬಗ್ಗೆ ಹೈಕಮಾಂಡ್ ಗಮನ ಸೆಳೆಯುವ ಉದ್ದೇಶದಿಂದ ರಾಜೀನಾಮೆ ನಿರ್ಧಾರ ಕೈಗೊಂಡಿದ್ದಾರೆ ಎನ್ನಲಾಗಿದೆ. ಈ ವಿಚಾರವನ್ನು ತಮ್ಮ ರಾಜೀನಾಮೆ ಪತ್ರದಲ್ಲಿಯೂ ಪ್ರಸ್ತಾಪಿಸಿದ್ದಾರೆ ಎಂದು ತಿಳಿದುಬಂದಿದೆ.

ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷ ಸ್ಥಾನಕ್ಕೆ ಬೇರೊಬ್ಬರನ್ನು ನೇಮಕ ಮಾಡುವವರೆಗೆ ತಾವು ಜವಾಬ್ದಾರಿಯಲ್ಲಿ ಮುಂದುವರಿಯುವುದಾಗಿ ಸೌಮ್ಯಾ ರೆಡ್ಡಿ ತಿಳಿಸಿದ್ದಾರೆ ಎನ್ನಲಾಗಿದೆ. ಮುಂದಿನ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಗಳಲ್ಲಿ ಸಾಮಾನ್ಯ ಕಾರ್ಯಕರ್ತೆಯಾಗಿ ಪಕ್ಷದ ಪರ ಕೆಲಸ ಮುಂದುವರಿಸುವ ಇಂಗಿತವನ್ನೂ ಅವರು ವ್ಯಕ್ತಪಡಿಸಿದ್ದಾರೆ.

# ಎಲ್‌ನಿನೊ ಹೊಡೆತ: ಫೆಬ್ರವರಿಯಲ್ಲೇ ಬೇಸಿಗೆ ಬಿಸಿ!

1ನೇ ಪುಟದಿಂದ

ವರದಿಯ ಪ್ರಕಾರ, 2026ರ ಮುಂಗಾರು ಮಳೆ ದೇಶದ ಹಲವು ಭಾಗಗಳಲ್ಲಿ ನಿರೀಕ್ಷೆಗಿಂತ ಕಡಿಮೆಯಾಗಿದೆ. ಕರ್ನಾಟಕದಲ್ಲಿ ವಾಡಿಕೆಗಿಂತ ಶೇ. 30ರಷ್ಟು ಮಳೆ ಕೊರತೆ ದಾಖಲಾಗಿದ್ದು, ಕೇರಳದಲ್ಲಿ ಶೇ. 28, ಆಂಧ್ರಪ್ರದೇಶದಲ್ಲಿ ಶೇ. 25 ಮತ್ತು ತಮಿಳುನಾಡಿನಲ್ಲಿ ಶೇ. 20ರಷ್ಟು ಕೊರತೆ ಕಂಡುಬಂದಿದೆ. ಕಡಿಮೆ ಮಳೆ ಹಾಗೂ ಹೆಚ್ಚುತ್ತಿರುವ ತಾಪಮಾನದಿಂದ ಮುಂದಿನ ಹಿಂಗಾರು ಮತ್ತು ಬೇಸಿಗೆ ಬೆಳೆಗಳಿಗೆ ತೊಂದರೆಯಾಗುವ ಆತಂಕವಿದೆ.

**ಕೃಷಿ ಮತ್ತು ನೀರಿನ ಸಂಗ್ರಹಕ್ಕೆ ಹೊಡೆತ:** ಮಳೆಯ ಕೊರತೆ ಹಾಗೂ ಅಸಮರ್ಪಕ ಹಂಚಿಕೆಯಿಂದ ಭತ್ತದ ಬಿತ್ತನೆ ಪ್ರದೇಶದಲ್ಲಿ ಇಳಿಕೆ ಕಂಡುಬಂದಿದೆ. ಮಣ್ಣಿನ ತೇವಾಂಶ ಕಡಿಮೆಯಾಗುವುದು, ಅಂತರ್ಜಲ ಮಟ್ಟ ಕುಸಿಯುವುದು ಮತ್ತು ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಡಿಮೆಯಾಗುವುದು ರಬಿ ಬೆಳೆಗಳ ಮೇಲೆ ಪರಿಣಾಮ ಬೀರಬಹುದು ಎಂದು ವರದಿ ತಿಳಿಸಿದೆ. ದಕ್ಷಿಣ ವಲಯದ ಜಲಾಶಯಗಳಲ್ಲಿ ನೀರಿನ ಸಂಗ್ರಹವು ಸಾಮಾನ್ಯ ಮಟ್ಟದ ಶೇ. 47.22ರಷ್ಟಿದೆ ಎಂದು ವರದಿ ಉಲ್ಲೇಖಿಸಿದೆ.

**ತಾಪಮಾನ ದಾಖಲೆ ಮುರಿಯುವ ಆತಂಕ:** ಎಲ್‌ನಿನೊ ಈ ವರ್ಷದ ಅಂತ್ಯದ ವೇಳೆಗೆ ತೀವ್ರಗೊಳ್ಳುವ ಸಾಧ್ಯತೆಯಿದ್ದು, ಅದರ ಪರಿಣಾಮ 2027ರ ಆರಂಭದವರೆಗೂ ಮುಂದುವರಿಯಬಹುದು ಎಂದು ವರದಿ ಎಚ್ಚರಿಸಿದೆ. ಜಾಗತಿಕ ತಾಪಮಾನ ಏರಿಕೆಯೊಂದಿಗೆ ಎಲ್‌ನಿನೊ ಸೇರಿಕೊಂಡರೆ ಬಿಸಿಲಿನ ತೀವ್ರತೆ ಹೆಚ್ಚುವ ಸಾಧ್ಯತೆಯಿದೆ. ಇದರಿಂದ ಆರೋಗ್ಯ, ಕೃಷಿ ಮತ್ತು ನೀರಿನ ಲಭ್ಯತೆ ಮೇಲೆ ಒತ್ತಡ ಉಂಟಾಗಬಹುದು.

ಹೀಗಾಗಿ, ಬಿಸಿಗಾಳಿಯನ್ನು ಎದುರಿಸಲು ಮುನ್ನೆಚ್ಚರಿಕೆ ವ್ಯವಸ್ಥೆಗಳನ್ನು ಬಲಪಡಿಸುವುದು, ಸಾರ್ವಜನಿಕ ಆರೋಗ್ಯ ಸಿದ್ಧತೆ ಹೆಚ್ಚಿಸುವುದು ಹಾಗೂ ನೀರಿನ ನಿರ್ವಹಣೆಗೆ ಮುಂಚಿತ ಯೋಜನೆ ರೂಪಿಸುವುದು ಅಗತ್ಯ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಆದರೆ, 2027ರ ಫೆಬ್ರವರಿಯಲ್ಲೇ ಬೇಸಿಗೆ ಆರಂಭವಾಗಲಿದೆ ಎಂಬುದು ಖಚಿತ ಮುನ್ಸೂಚನೆಯಲ್ಲ; ಇದು ಎಲ್‌ನಿನೊದ ಸಂಭವನೀಯ ಪರಿಣಾಮಗಳ ಕುರಿತ ವರದಿಯ ಅಂದಾಜಾಗಿದೆ.

# 22ರವರೆಗೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರಿ ಮಳೆ ಎಚ್ಚರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ವಾಯುಭಾರ ಕುಸಿತದ ಪರಿಣಾಮ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆ ಚುರುಕುಗೊಂಡಿದ್ದು, ಬೆಂಗಳೂರು ಸೇರಿದಂತೆ ದಕ್ಷಿಣ ಒಳನಾಡು, ಕರಾವಳಿ ಹಾಗೂ ಉತ್ತರ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಅಕ್ಟೋಬರ್ 22ರವರೆಗೆ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಮಳೆಯ ಮುನ್ಸೂಚನೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಹಲವು ಜಿಲ್ಲೆಗಳಿಗೆ ಯೆಲ್ಲೊ ಅಲರ್ಟ್ ಘೋಷಿಸಿದೆ.

ಶನಿವಾರ ಬೆಂಗಳೂರಿನಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿತ್ತು. ಸಂಜೆ ನಗರದ ಲಾಲ್‌ಬಾಗ್, ಶಾಂತಿನಗರ, ಕಾರ್ಪೊರೇಷನ್ ವೃತ್ತ ಸೇರಿದಂತೆ ಹಲವು ಪ್ರದೇಶಗಳಲ್ಲಿ ಬಿರುಸಿನ ಮಳೆಯಾಯಿತು. ಇದರಿಂದ ಪ್ರಮುಖ ರಸ್ತೆಗಳಲ್ಲಿ ವಾಹನ ದಟ್ಟಣೆ ಉಂಟಾಗಿ, ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳು ತೊಂದರೆ ಅನುಭವಿಸಿದರು.

ಮುಂದಿನ ದಿನಗಳಲ್ಲಿಯೂ ಮಳೆ ಮುಂದುವರಿಯುವ ಸಾಧ್ಯತೆಯಿರುವುದರಿಂದ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡದಲ್ಲಿಯೂ ಮುಂದಿನ ಕೆಲವು ದಿನಗಳ ಕಾಲ ಗುಡುಗು ಸಹಿತ ಭಾರಿ ಮಳೆಯಾಗುವ ನಿರೀಕ್ಷೆಯಿದೆ. ಕೆಲವು ಪ್ರದೇಶಗಳಲ್ಲಿ ಬಿರುಗಾಳಿ ಬೀಸುವ ಸಾಧ್ಯತೆಯೂ ಇದೆ. ಹೀಗಾಗಿ ಮೀನುಗಾರರು ಹಾಗೂ ಕಡಲತೀರದ ನಿವಾಸಿಗಳು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

ಬೆಂಗಳೂರು ಸೇರಿದಂತೆ ಮಳೆಯ ಮುನ್ಸೂಚನೆ ಇರುವ ಜಿಲ್ಲೆಗಳಲ್ಲಿ ತಗ್ಗು ಪ್ರದೇಶಗಳು ಹಾಗೂ ನೀರು ನಿಲ್ಲುವ ರಸ್ತೆಗಳಲ್ಲಿ ಸಂಚರಿಸುವಾಗ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು. ಮಿಂಚು ಮತ್ತು ಬಿರುಗಾಳಿ ಕಾಣಿಸಿಕೊಂಡಾಗ ಮರಗಳ ಕೆಳಗೆ ಅಥವಾ ದುರ್ಬಲ ಕಟ್ಟಡಗಳ ಸಮೀಪ ಆಶ್ರಯ ಪಡೆಯದಂತೆ ಸಲಹೆ ನೀಡಲಾಗಿದೆ.

## *ಲಾರಿ ಪಲ್ಟಿ: ಗಾಯಾಳುಗಳಿಗೆ ನೆರವಾಗದೆ ಈರುಳ್ಳಿ ದೋಚಿದ ಜನರು*

● ವಿಕ್ರಮ ವಾಹಿನಿ । ರಾಯಚೂರು

*ಈರುಳ್ಳಿ ತುಂಬಿದ್ದ ಲಾರಿಯೊಂದು ಪಲ್ಟಿಯಾದ ಬಳಿಕ ಗಾಯಗೊಂಡ ಚಾಲಕ ಮತ್ತು ಕ್ಲೀನರ್‌ಗೆ ನೆರವಾಗುವ ಬದಲು, ಸ್ಥಳಕ್ಕೆ ಧಾವಿಸಿದ ಜನರು ಲಾರಿಯಲ್ಲಿದ್ದ ಈರುಳ್ಳಿಯನ್ನು ದೋಚಿದ ಘಟನೆ ಜಿಲ್ಲೆಯ ಮಾನ್ವಿ ತಾಲೂಕಿನ ಕಪಗಲ್ ಗ್ರಾಮದ ಬಳಿ ಶನಿವಾರ ನಡೆದಿದೆ.*

*ಚಾಲಕನ ನಿಯಂತ್ರಣ ತಪ್ಪಿದ ಲಾರಿ ರಸ್ತೆಯಲ್ಲಿ ಪಲ್ಟಿಯಾಗಿದ್ದು, ಅಪಘಾತದಲ್ಲಿ ಚಾಲಕ ಮತ್ತು ಕ್ಲೀನರ್ ಗಾಯಗೊಂಡಿದ್ದಾರೆ. ಅದೃಷ್ಟವಶಾತ್ ಇಬ್ಬರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಆದರೆ, ಗಾಯಾಳುಗಳಿಗೆ ನೆರವಾಗಬೇಕಿದ್ದ ಸ್ಥಳೀಯರು ಹಾಗೂ ಅಲ್ಲಿ ಜಮಾಯಿಸಿದ ಜನರು ಲಾರಿಯಲ್ಲಿದ್ದ ಈರುಳ್ಳಿ ಚೀಲಗಳನ್ನು ಹೊತ್ತೊಯ್ಯಲು ಮುಗಿಬಿದ್ದಿದ್ದಾರೆ ಎನ್ನಲಾಗಿದೆ.*

*ಕೇವಲ 15ರಿಂದ 20 ನಿಮಿಷಗಳಲ್ಲೇ ಲಾರಿಯಲ್ಲಿದ್ದ ಸಂಪೂರ್ಣ ಈರುಳ್ಳಿ ಖಾಲಿಯಾಗಿದೆ. ಜನರು ಚೀಲಗಳಲ್ಲಿ ಈರುಳ್ಳಿ ತುಂಬಿಕೊಂಡು ಹೋಗುತ್ತಿರುವ ದೃಶ್ಯಗಳು ವಿಡಿಯೊದಲ್ಲಿ ಸೆರೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಗೆ ಕಾರಣವಾಗಿವೆ. ಘಟನೆಯ ಮಾಹಿತಿ ತಿಳಿದು ಮಾನ್ವಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತದ ಸಂದರ್ಭದಲ್ಲಿ ಗಾಯಾಳುಗಳಿಗೆ ನೆರವಾಗುವ ಬದಲು ಸರಕು ದೋಚಿದ ಘಟನೆ ಸಾರ್ವಜನಿಕರ ವರ್ತನೆ ಕುರಿತು ಪ್ರಶ್ನೆಗಳನ್ನು ಹುಟ್ಟುಹಾಕಿದೆ.*

# ಮೇಡಿ ಅಗ್ರಹಾರ ಶ್ವಾನ ಆಶ್ರಯ ಕೇಂದ್ರದಲ್ಲಿ ನಾಯಿಗಳಿಗೆ ಪೌಷ್ಟಿಕ ಆಹಾರ, ಲಸಿಕೆ



● ವಿಕ್ರಮ ವಾಹಿನಿ । ಬೆಂಗಳೂರು

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನಗಳ ಅನುಷ್ಠಾನದ ಅಂಗವಾಗಿ, ಬೆಂಗಳೂರು ಉತ್ತರ ನಗರ ಪಾಲಿಕೆಯು ಮೇಡಿ ಅಗ್ರಹಾರದಲ್ಲಿರುವ ಶ್ವಾನ ಆಶ್ರಯ ಕೇಂದ್ರದಲ್ಲಿ ಬೀದಿ ನಾಯಿಗಳಿಗೆ ಪೌಷ್ಟಿಕ ಆಹಾರ, ರೇಬೀಸ್ ನಿರೋಧಕ ಲಸಿಕೆ, ಜಂತುಹುಳು ನಿವಾರಕ ಔಷಧಿ ಹಾಗೂ ಅಗತ್ಯ ವೈದ್ಯಕೀಯ ಆರೈಕೆ ಒದಗಿಸುತ್ತಿದೆ. 500 ನಾಯಿಗಳ ಸಾಮರ್ಥ್ಯ ಹೊಂದಿರುವ ಆಶ್ರಯ ಕೇಂದ್ರವನ್ನು ಪಾಲಿಕೆಯ ಪಶುಪಾಲನಾ ವಿಭಾಗದ ಮೇಲ್ವಿಚಾರಣೆಯಲ್ಲಿ ನಿರ್ವಹಿಸಲಾಗುತ್ತಿದ್ದು, ನಾಯಿಗಳ ಆರೋಗ್ಯ, ಸುರಕ್ಷತೆ ಮತ್ತು ಕಲ್ಯಾಣಕ್ಕೆ ಆದ್ಯತೆ ನೀಡಲಾಗಿದೆ.

**ತೂಕಕ್ಕೆ ಅನುಗುಣವಾಗಿ ಆಹಾರ ವಿತರಣೆ:** ಆಶ್ರಯ ಕೇಂದ್ರದಲ್ಲಿರುವ ನಾಯಿಗಳಿಗೆ ಅವುಗಳ ವಯಸ್ಸು, ದೇಹದ ತೂಕ ಮತ್ತು ಆರೋಗ್ಯ ಸ್ಥಿತಿಗೆ ಅನುಗುಣವಾಗಿ ಪ್ರತಿದಿನ ಎರಡರಿಂದ ಮೂರು ಬಾರಿ ಆಹಾರ ನೀಡಲಾಗುತ್ತಿದೆ. ಆಹಾರದಲ್ಲಿ ಕೋಳಿ ಮಾಂಸ, ಅನ್ನ, ತರಕಾರಿಗಳು ಸೇರಿದಂತೆ ಅಗತ್ಯ ಪೌಷ್ಟಿಕಾಂಶಯುಕ್ತ ಪದಾರ್ಥಗಳನ್ನು ಸೇರಿಸಲಾಗಿದ್ದು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನೂ ಕಲ್ಪಿಸಲಾಗಿದೆ.

**ಆರೋಗ್ಯ ತಪಾಸಣೆ, ಲಸಿಕೆ:** ಕೇಂದ್ರಕ್ಕೆ ಕರೆತರುವ ಪ್ರತಿಯೊಂದು ನಾಯಿಯ ಆರೋಗ್ಯ ತಪಾಸಣೆ ನಡೆಸಿ, ದೇಹದ ತೂಕವನ್ನು ದಾಖಲಿಸಲಾಗುತ್ತದೆ. ಪಶುವೈದ್ಯರ ಸಲಹೆಯಂತೆ ರೇಬೀಸ್ ನಿರೋಧಕ ಲಸಿಕೆ ಹಾಗೂ ಜಂತುಹುಳು ನಿವಾರಕ ಔಷಧಿ ನೀಡಲಾಗುತ್ತಿದೆ. ಅನಾರೋಗ್ಯದಿಂದ ಬಳಲುವ ಮತ್ತು ಗಾಯಗೊಂಡ ನಾಯಿಗಳಿಗೆ ಅಗತ್ಯ ಚಿಕಿತ್ಸೆ ಒದಗಿಸಿ, ಆರೋಗ್ಯದ ಮೇಲೆ ನಿಗಾ ವಹಿಸಲಾಗುತ್ತಿದೆ.

**ಸ್ವಚ್ಛತೆಗೆ ಆದ್ಯತೆ:** ನಾಯಿಗಳ ಸುರಕ್ಷಿತ ವಾಸ್ತವ್ಯಕ್ಕಾಗಿ ಪ್ರತ್ಯೇಕ ಕೆನಲ್‌ಗಳನ್ನು ವ್ಯವಸ್ಥೆ ಮಾಡಲಾಗಿದೆ. ವಾಸಸ್ಥಳಗಳ ಸ್ವಚ್ಛತೆ, ಆಹಾರ ತಯಾರಿಕೆ ಮತ್ತು ವಿತರಣೆ ಸೇರಿದಂತೆ ವಿವಿಧ ವ್ಯವಸ್ಥೆಗಳನ್ನು ಪಾಲಿಕೆಯ ಪಶುಪಾಲನಾ ವಿಭಾಗವು ಅಕ್ಟೋಬರ್ 17ರಂದು ಪರಿಶೀಲಿಸಿತು.

**ದತ್ತು ಪಡೆಯಲು ಅವಕಾಶ:** ಆಶ್ರಯ ಕೇಂದ್ರದಲ್ಲಿರುವ ನಾಯಿಗಳನ್ನು ದತ್ತು ಪಡೆಯಲು ಆಸಕ್ತಿ ಹೊಂದಿರುವ ಸಾರ್ವಜನಿಕರು ಮತ್ತು ಪ್ರಾಣಿ ಪ್ರೇಮಿಗಳು ಪಾಲಿಕೆಯ ಪಶುಪಾಲನಾ ವಿಭಾಗವನ್ನು ಸಂಪರ್ಕಿಸಬಹುದು. ನಿಗದಿತ ನಿಯಮಗಳಂತೆ ದತ್ತು ಪಡೆಯಲು ಅವಕಾಶವಿದ್ದು, ನಾಯಿಗಳಿಗೆ ಸೂಕ್ತ ಆಹಾರ, ವಸತಿ ಮತ್ತು ವೈದ್ಯಕೀಯ ಆರೈಕೆ ಒದಗಿಸುವ ಜವಾಬ್ದಾರಿಯನ್ನು ದತ್ತು ಪಡೆಯುವವರು ನಿರ್ವಹಿಸಬೇಕು.

ಬೀದಿ ನಾಯಿಗಳ ಸಂರಕ್ಷಣೆ, ಆರೋಗ್ಯ ರಕ್ಷಣೆ ಮತ್ತು ದತ್ತು ಸ್ವೀಕಾರ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಹಾಗೂ ಪ್ರಾಣಿ ಕಲ್ಯಾಣ ಸಂಘಟನೆಗಳು ಸಹಕರಿಸುವಂತೆ ಬೆಂಗಳೂರು ಉತ್ತರ ನಗರ ಪಾಲಿಕೆ ಮನವಿ ಮಾಡಿದೆ.

# ಅರ್ಥಪೂರ್ಣ ವಾಲ್ಮೀಕಿ ಜಯಂತಿ ಆಚರಣೆಗೆ ನಿರ್ಧಾರ: ರಘುಮೂರ್ತಿ

● ವಿಕ್ರಮ ವಾಹಿನಿ । ಬೆಂಗಳೂರು

ಮಹರ್ಷಿ ವಾಲ್ಮೀಕಿಯವರ ಆದರ್ಶಗಳು, ಜೀವನ ಸಂದೇಶ ಹಾಗೂ ಸಾಹಿತ್ಯಿಕ ಕೊಡುಗೆಗಳನ್ನು ಜನರಿಗೆ ಪರಿಚಯಿಸುವ ಉದ್ದೇಶದಿಂದ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ತಿಳಿಸಿದರು.

ಬೆಂಗಳೂರಿನ ವಿಕಾಸಸೌಧದಲ್ಲಿ ಶನಿವಾರ ತಮ್ಮ ಅಧ್ಯಕ್ಷತೆಯಲ್ಲಿ ನಡೆದ ವಾಲ್ಮೀಕಿ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಪರಿಶಿಷ್ಟ ಪಂಗಡಗಳ ಸಮುದಾಯದ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಸಂಬಂಧಿಸಿದ ಬೇಡಿಕೆಗಳ ಕುರಿತು ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರೊಂದಿಗೆ ಚರ್ಚೆ ನಡೆಸಲಾಯಿತು.

**ಮೀಸಲಾತಿ ಹೆಚ್ಚಳಕ್ಕೆ ಪರಿಶೀಲನೆ:** ಪರಿಶಿಷ್ಟ ಪಂಗಡಗಳ ಮೀಸಲಾತಿ ಹೆಚ್ಚಳದ ಬೇಡಿಕೆಯನ್ನು ಮುಖಂಡರು ಸಭೆಯಲ್ಲಿ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಸಂಬಂಧಪಟ್ಟ ಅಧಿಕಾರಿಗಳು ಹಾಗೂ



ಸರ್ಕಾರದ ಮಟ್ಟದಲ್ಲಿ ಚರ್ಚಿಸಿ, ಪರಿಶೀಲನೆಯ ಬಳಿಕ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಇಲಾಖೆಯ ವಿವಿಧ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂಬ ಅಹವಾಲುಗಳಿಗೂ ಸ್ಪಂದಿಸಿದ ಅವರು, ಯೋಜನೆಗಳ ಅನುಷ್ಠಾನದ ಕುರಿತು ಮಾಹಿತಿ ಪಡೆದು ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

**ವಾಲ್ಮೀಕಿ ಭವನ ನಿರ್ಮಾಣಕ್ಕೆ ಒತ್ತಾಯ**

ಬೆಂಗಳೂರಿನ ವಿಧಾನಸೌಧದ ಸಮೀಪ ಸೂಕ್ತ ಸ್ಥಳ ಗುರುತಿಸಿ ವಾಲ್ಮೀಕಿ ಭವನ, ಆಡಳಿತ ಸೌಧ ಹಾಗೂ ಸಭಾಭವನ ನಿರ್ಮಿಸಬೇಕು ಎಂದು ಮುಖಂಡರು ಒತ್ತಾಯಿಸಿದರು. ಕಟ್ಟಡಗಳ ವಿನ್ಯಾಸ, ಮೂಲಸೌಕರ್ಯ ಹಾಗೂ ಸಮುದಾಯದ ಶೈಕ್ಷಣಿಕ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಅಗತ್ಯ ವ್ಯವಸ್ಥೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಶಾಸಕರ ಭವನದಲ್ಲಿರುವ ವಾಲ್ಮೀಕಿ ಉದ್ಯಾನವನ್ನು ಅಭಿವೃದ್ಧಿಪಡಿಸಿ, ಮಹರ್ಷಿ ವಾಲ್ಮೀಕಿಯವರ ಜೀವನ, ಆದರ್ಶಗಳು ಮತ್ತು ಸಾಹಿತ್ಯಿಕ ಕೊಡುಗೆಗಳನ್ನು ಬಿಂಬಿಸುವಂತೆ ರೂಪಿಸುವ ಬಗ್ಗೆಯೂ ಸಮಾಲೋಚನೆ ನಡೆಸಲಾಯಿತು. ಈ ಸಂಬಂಧ ಸಿದ್ಧಪಡಿಸಿದ ಸಾಕ್ಷ್ಯಚಿತ್ರಗಳನ್ನು ಸಭೆಯಲ್ಲಿ ಪ್ರದರ್ಶಿಸಲಾಯಿತು.

**ವಸತಿ ಶಾಲೆಗಳ ಸಮಸ್ಯೆ ಪರಿಹಾರಕ್ಕೆ ಆಗ್ರಹ**

ಪರಿಶಿಷ್ಟ ಪಂಗಡಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ವಿದ್ಯಾರ್ಥಿನಿಲಯಗಳಲ್ಲಿ ಉತ್ತಮ ಮೂಲಸೌಕರ್ಯ, ಅರ್ಹರಿಗೆ ವಸತಿ ಸೌಲಭ್ಯ ಹಾಗೂ ಭೂಮಿಗೆ ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕೆ ಮುಖಂಡರು ಮನವಿ ಮಾಡಿದರು.

ಪರಿಶಿಷ್ಟ ಪಂಗಡಗಳ ವಿಶ್ವವಿದ್ಯಾಲಯದ ಅಭಿವೃದ್ಧಿ ಹಾಗೂ ಸಮುದಾಯದ ಇತಿಹಾಸ, ಪರಂಪರೆ ಮತ್ತು ಸಂಸ್ಕೃತಿಯನ್ನು ಪರಿಚಯಿಸುವ ವಸ್ತುಸಂಗ್ರಹಾಲಯದ ಅಭಿವೃದ್ಧಿಯ ಬಗ್ಗೆಯೂ ಚರ್ಚಿಸಲಾಯಿತು. ಸಮುದಾಯದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಬೇಡಿಕೆಗಳನ್ನು ಪರಿಶೀಲಿಸಿ, ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಚಿವರು ಭರವಸೆ ನೀಡಿದರು.

# ಪತ್ರಿಕೆಗಳ ನೋಂದಣಿ ಸಂಪೂರ್ಣ ಆನ್‌ಲೈನ್: ಯೋಗೇಶ್ ಕುಮಾರ್ ಬವೇಜಾ

● ವಿಕ್ರಮ ವಾಹಿನಿ । ಬೆಂಗಳೂರು

ಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸಲು ಕೇಂದ್ರ ಸರ್ಕಾರವು ಡಿಜಿಟಲ್ ವ್ಯವಸ್ಥೆ ಜಾರಿಗೆ ತಂದಿದ್ದು, ಇನ್ನು ಮುಂದೆ ನೋಂದಣಿಗೆ ಸಂಬಂಧಿಸಿದ ಎಲ್ಲ ಪ್ರಕ್ರಿಯೆಗಳು ಆನ್‌ಲೈನ್‌ನಲ್ಲೇ ನಡೆಯಲಿವೆ ಎಂದು ಭಾರತದ ಪತ್ರಿಕಾ ನೋಂದಣಿ ಪ್ರಧಾನ ಮಹಾನಿರ್ದೇಶಕ ಯೋಗೇಶ್ ಕುಮಾರ್ ಬವೇಜಾ ತಿಳಿಸಿದರು.

ವಾರ್ತಾ ಮತ್ತು ಪ್ರಸಾರ ಸಚಿವಾಲಯದ ವಾರ್ತಾ ಶಾಖೆ ಹಾಗೂ ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಶನಿವಾರ ವಾರ್ತಾಸೌಧದ ಮಹಾತ್ಮ ಗಾಂಧಿ ಮಾಧ್ಯಮ ಕೇಂದ್ರದಲ್ಲಿ ಆಯೋಜಿಸಿದ್ದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಹಿಂದೆ ಹೊಸ ಪತ್ರಿಕೆ ಆರಂಭಿಸಲು ಜಿಲ್ಲಾಧಿಕಾರಿ ಕಚೇರಿ ಮೂಲಕ ಅರ್ಜಿ ಸಲ್ಲಿಸಿ, ದೆಹಲಿಗೆ ದಾಖಲೆಗಳನ್ನು ಕಳುಹಿಸಬೇಕಿತ್ತು. ಇದರಿಂದ ನೋಂದಣಿ ಪ್ರಕ್ರಿಯೆ ಪೂರ್ಣಗೊಳ್ಳಲು ತಿಂಗಳುಗಳಿಂದ ವರ್ಷಗಳವರೆಗೆ ವಿಳಂಬವಾಗುತ್ತಿತ್ತು. ಹೊಸ ಕಾಯ್ದೆಯಡಿ ಪ್ರಕ್ರಿಯೆ ಡಿಜಿಟಲೀಕರಣಗೊಂಡಿದ್ದು, ಭೌತಿಕ ದಾಖಲೆಗಳ ಸಲ್ಲಿಕೆ ಅಗತ್ಯವಿಲ್ಲ. ಇದರಿಂದ ಸಮಯ ಉಳಿತಾಯವಾಗುವುದರ ಜತೆಗೆ ದಾಖಲೆಗಳ ನಿರ್ವಹಣೆಯೂ ಸುಲಭವಾಗಲಿದೆ ಎಂದರು.

**ಮೂರು ತಿಂಗಳೊಳಗೆ ಪತ್ರಿಕೆ ಆರಂಭಿಸಲು ಅವಕಾಶ**

ಅರ್ಜಿ ಸಲ್ಲಿಸಿದ ಮೂರು ತಿಂಗಳೊಳಗೆ ಹೊಸ ಪತ್ರಿಕೆ ಆರಂಭಿಸಲು ಅವಕಾಶವಿದೆ. ಆದರೆ, ಪತ್ರಿಕೆಯ ಶೀರ್ಷಿಕೆಗೆ ಅಂತಿಮ ಅನುಮೋದನೆ ದೊರೆತ ಬಳಿಕ 12 ತಿಂಗಳೊಳಗೆ ಪ್ರಕಟಣೆ ಆರಂಭಿಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಹೊಸ ನೋಂದಣಿ, ಹೊಸ ಆವೃತ್ತಿಗಳ ಸೇರ್ಪಡೆ, ಮಾಲೀಕತ್ವ ಮತ್ತು ವಿಳಾಸ ಬದಲಾವಣೆ, ನೋಂದಣಿ ಪರಿಷ್ಕರಣೆ, ದಂಡ ಪಾವತಿ ಹಾಗೂ ಪತ್ರಿಕೆಗಳ ಸ್ಥಗಿತ ಅಥವಾ ನೋಂದಣಿ ರದ್ದತಿ ಸೇರಿದಂತೆ ವಿವಿಧ ಪ್ರಕ್ರಿಯೆಗಳನ್ನು ಪ್ರೆಸ್ ಸೇವಾ ಪೋರ್ಟಲ್ ಮೂಲಕ ನಿರ್ವಹಿಸುವ ವಿಧಾನವನ್ನು ವಿವರಿಸಿದರು.



**ಅಭಿವೃದ್ಧಿ ಪತ್ರಿಕೋದ್ಯಮಕ್ಕೆ ಆದ್ಯತೆ ನೀಡಿ**

ಕಾರ್ಯಕ್ರಮದಲ್ಲಿ ಮಾತನಾಡಿದ ವಾರ್ತಾ ಇಲಾಖೆಯ ಕಾರ್ಯದರ್ಶಿ ಜೆ. ಮಂಜುನಾಥ್, ಮಾಧ್ಯಮವು ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭವಾಗಿದೆ. ಸಮಾಜದ ಸಮಸ್ಯೆಗಳನ್ನು ವರದಿ ಮಾಡುವುದರ ಜತೆಗೆ ಜನರಿಗೆ ಆಶಾದಾಯಕ ಸಂದೇಶ ನೀಡುವ ಮತ್ತು ಅಭಿವೃದ್ಧಿಗೆ ಪೂರಕವಾದ ಪತ್ರಿಕೋದ್ಯಮಕ್ಕೂ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಸರ್ಕಾರದ ಮಾಧ್ಯಮ ಪಟ್ಟಿಗೆ ಸೇರ್ಪಡೆಯಾಗುತ್ತಿರುವ ಪತ್ರಿಕೆಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನೋಂದಣಿ, ಪತ್ರಿಕೆಗಳ ನಿಯಮಿತ ಪ್ರಕಟಣೆ ಮತ್ತು ಪ್ರಸಾರ ಸಂಖ್ಯೆಯ ಕುರಿತು ಹೆಚ್ಚಿನ ನಿಗಾ ವಹಿಸುವ ಅಗತ್ಯವಿದೆ. ಕೃತಕ ಬುದ್ಧಿಮತ್ತೆ ಸೇರಿದಂತೆ ಆಧುನಿಕ ತಂತ್ರಜ್ಞಾನಗಳ ಬಳಕೆಯ ಹಿನ್ನೆಲೆಯಲ್ಲಿ ಪತ್ರಿಕೆಗಳ ಹಾಜರಾತಿ ಪರಿಶೀಲನಾ ವ್ಯವಸ್ಥೆಯನ್ನೂ ಮರುಪರಿಶೀಲಿಸಬೇಕಿದೆ ಎಂದರು.

**ಪ್ರೋತ್ಸಾಹ ಜಾಹೀರಾತು ವೆಚ್ಚ ದ್ವಿಗುಣ**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಎಂ.ಎನ್. ಅನುಚೇತ್ ಮಾತನಾಡಿ, ಸರ್ಕಾರ ನೀಡುವ ಪ್ರೋತ್ಸಾಹ ಜಾಹೀರಾತುಗಳನ್ನು ನೈಜವಾಗಿ ಪತ್ರಿಕೋದ್ಯಮದಲ್ಲಿ ತೊಡಗಿಸಿಕೊಂಡಿರುವ ಪತ್ರಿಕೆಗಳಿಗೆ ತಲುಪಿಸುವುದು ಅಗತ್ಯ ಎಂದರು.

ಪ್ರೋತ್ಸಾಹ ಜಾಹೀರಾತಿಗಾಗಿ 2022ರಲ್ಲಿ 44 ಕೋಟಿ ವೆಚ್ಚವಾಗಿದ್ದರೆ, 2025–26ನೇ ಸಾಲಿನಲ್ಲಿ ಈ ವೆಚ್ಚ 82 ಕೋಟಿಗೆ ಏರಿಕೆಯಾಗಿದೆ. ಜಾಹೀರಾತು ಪಡೆಯುವ ಉದ್ದೇಶಕ್ಕಾಗಿಯೇ ಪತ್ರಿಕೆಗಳು ಆರಂಭವಾಗುತ್ತಿರುವುದನ್ನು ನಿಯಂತ್ರಿಸಿ, ಅರ್ಹ ಪತ್ರಿಕೆಗಳಿಗೆ ಮಾತ್ರ ಸೌಲಭ್ಯ ತಲುಪಿಸುವ ನಿಟ್ಟಿನಲ್ಲಿ ಕ್ರಮ ಅಗತ್ಯವಿದೆ ಎಂದು ಹೇಳಿದರು.

ಸಾಮಾಜಿಕ ಜಾಲತಾಣಗಳ ಪ್ರಭಾವ ಹೆಚ್ಚುತ್ತಿರುವ ಇಂದಿನ ಡಿಜಿಟಲ್ ಯುಗದಲ್ಲಿ ‘ಪತ್ರಕರ್ತ’ ಎಂಬುದಕ್ಕೆ ಸ್ಪಷ್ಟ ವ್ಯಾಖ್ಯಾನ ರೂಪಿಸುವ ಕುರಿತು ರಾಷ್ಟ್ರಮಟ್ಟದಲ್ಲಿ ಗಂಭೀರ ಚರ್ಚೆ ನಡೆಯಬೇಕು ಎಂದರು.

ಕಾರ್ಯಕ್ರಮದ ಆರಂಭದಲ್ಲಿ ದೂರದರ್ಶನ ಕೇಂದ್ರದ ಮುಖ್ಯಸ್ಥ ಬಿ.ಕೆ. ಕೇಶವಮೂರ್ತಿ ಕಾರ್ಯಾಗಾರದ ಉದ್ದೇಶ ವಿವರಿಸಿದರು. ಎನ್‌ಐಸಿ ಉಪನಿರ್ದೇಶಕ ಗೌರವ್ ಶರ್ಮಾ, ವಾರ್ತಾ ಇಲಾಖೆಯ ಹಿರಿಯ ಅಧಿಕಾರಿಗಳು, ರಾಜ್ಯದ ವಿವಿಧ ಜಿಲ್ಲೆಗಳ ವಾರ್ತಾಧಿಕಾರಿಗಳು ಹಾಗೂ ಪತ್ರಿಕೆಗಳ ಮಾಲೀಕರು ಮತ್ತು ಸಂಪಾದಕರು ಭಾಗವಹಿಸಿದ್ದರು.

# ಅಧಿಕಾರಿಗಳಿಗೆ ಗೌರವಧನ ಹೇಳಿಕೆ: ಸಚಿವ ಶಿವಲಿಂಗೇಗೌಡಗೆ ಸಂಕಷ್ಟ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಅಧಿಕಾರಿಗಳಿಗೆ ಗೌರವಧನ ನೀಡುವ ಕುರಿತು ನೀಡಿದ್ದ ಹೇಳಿಕೆಯಿಂದ ವಿವಾದಕ್ಕೆ ಸಿಲುಕಿರುವ ಅಬಕಾರಿ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಅವರಿಗೆ ಮತ್ತಷ್ಟು ರಾಜಕೀಯ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಸಚಿವರ ಹೇಳಿಕೆಗೆ ಸಂಬಂಧಿಸಿದಂತೆ ರಾಜ್ಯಪಾಲರು ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದು ವರದಿ ಕೇಳಿರುವುದು ಮಹತ್ವದ ಬೆಳವಣಿಗೆಯಾಗಿದೆ.

ಕೆಲವು ವಾರಗಳ ಹಿಂದೆ ಸಕಲೇಶಪುರದಲ್ಲಿ ನಡೆದ ಪ್ರಜಾಸೇವೆ ಆಂದೋಲನದ ಸಭೆಯಲ್ಲಿ ಸಚಿವರು ಅಧಿಕಾರಿಗಳಿಗೆ ಗೌರವಯುತವಾಗಿ ಹಣ ನೀಡುವ ಕುರಿತು ಮಾತನಾಡಿದ್ದರು. ಈ ಹೇಳಿಕೆಯ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿ, ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆ ಹಾಗೂ ಆಕ್ರೋಶಕ್ಕೆ ಕಾರಣವಾಗಿತ್ತು.

ಸಚಿವರ ಹೇಳಿಕೆ ಭ್ರಷ್ಟಾಚಾರಕ್ಕೆ ಉತ್ತೇಜನ ನೀಡುವಂತಿದೆ ಎಂದು ಆಕ್ಷೇಪಿಸಿದ್ದ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಅವರು ರಾಜ್ಯಪಾಲರಿಗೆ ದೂರು ಸಲ್ಲಿಸಿ, ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದರು. ಈ ದೂರಿನ ಹಿನ್ನೆಲೆಯಲ್ಲಿ ರಾಜ್ಯಪಾಲರು ವರದಿ ಕೇಳಿರುವುದು ಪ್ರಕರಣಕ್ಕೆ ಹೊಸ ತಿರುವು ನೀಡಿದೆ.

ವಿವಾದದ ಬೆನ್ನಲ್ಲೇ ಸ್ಪಷ್ಟನೆ ನೀಡಿದ್ದ ಶಿವಲಿಂಗೇಗೌಡ, ಅಧಿಕಾರಿಗಳಿಗೆ ಲಂಚ ನೀಡುವಂತೆ ತಾವು ಹೇಳಿಲ್ಲ; ಕೆಲಸ ಮಾಡಿಕೊಟ್ಟ ಅಧಿಕಾರಿಗಳೊಂದಿಗೆ ಗೌರವದಿಂದ ನಡೆದುಕೊಳ್ಳಬೇಕು ಎಂಬ ಅರ್ಥದಲ್ಲಿ ಮಾತನಾಡಿದ್ದಾಗಿ ಸಮರ್ಥಿಸಿಕೊಂಡಿದ್ದರು. ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದೂ ತಿಳಿಸಿದ್ದರು.

ರಾಜ್ಯಪಾಲರು ವರದಿ ಕೇಳಿರುವುದರಿಂದಲೇ ಸಚಿವರ ವಿರುದ್ಧದ ಆರೋಪಗಳು ಸಾಬೀತಾಗಿವೆ ಎಂದರ್ಥವಲ್ಲ. ಮುಖ್ಯ ಕಾರ್ಯದರ್ಶಿ ಸಲ್ಲಿಸುವ ವರದಿಯಲ್ಲಿನ ಅಂಶಗಳ ಆಧಾರದ ಮೇಲೆ ಮುಂದಿನ ಬೆಳವಣಿಗೆಗಳು ನಿರ್ಧಾರವಾಗುವ ಸಾಧ್ಯತೆಯಿದೆ.

ಆದರೂ, ಸಚಿವರ ಹೇಳಿಕೆ ಇದೀಗ ರಾಜಕೀಯ ಚರ್ಚೆಯ ಜೊತೆಗೆ ಸಾಂವಿಧಾನಿಕ ಪ್ರಕ್ರಿಯೆಯ ಭಾಗವಾಗಿರುವುದು ಅವರ ಪಾಲಿಗೆ ಮುಜುಗರ ತಂದಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ಗುಲಾಬಿ ಮೆಟ್ರೋ ಉದ್ಘಾಟನೆಗೆ ಮೋದಿ ಆಹ್ವಾನ

● ವಿಕ್ರಮ ವಾಹಿನಿ | ಬೆಂಗಳೂರು

ನಮ್ಮ ಮೆಟ್ರೋದ ಗುಲಾಬಿ ಮಾರ್ಗದ ಮೊದಲ ಹಂತದ ಉದ್ಘಾಟನೆಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪತ್ರ ಬರೆದಿದ್ದಾರೆ. ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗಿನ 7.5 ಕಿ.ಮೀ. ಉದ್ದದ ಎತ್ತರಿಸಿದ ಮಾರ್ಗವನ್ನು ಉದ್ಘಾಟಿಸಲು ದಿನಾಂಕ ನಿಗದಿಪಡಿಸುವಂತೆ ಮನವಿ ಮಾಡಿದ್ದಾರೆ.

ಪ್ರಧಾನಿಯವರ ಸಮಯಾವಕಾಶದ ಆಧಾರದ ಮೇಲೆ ಈ ತಿಂಗಳ ಕೊನೆಯ ವಾರ ಅಥವಾ ನವೆಂಬರ್ ಮೊದಲ ವಾರದಲ್ಲಿ ಮಾರ್ಗ ಉದ್ಘಾಟನೆಯಾಗುವ ನಿರೀಕ್ಷೆಯಿದೆ. ಪ್ರಧಾನಿ ಆಗಮಿಸಲು ಸಾಧ್ಯವಾಗದಿದ್ದರೆ ನವೆಂಬರ್ 1ರ ಕನ್ನಡ ರಾಜ್ಯೋತ್ಸವದಂದು ಮಾರ್ಗವನ್ನು ಲೋಕಾರ್ಪಣೆ ಮಾಡುವ ಪರ್ಯಾಯ ಚಿಂತನೆಯೂ ನಡೆದಿದೆ ಎನ್ನಲಾಗಿದೆ.

**ಆರು ನಿಲ್ದಾಣಗಳ ಮಾರ್ಗ:** ಈ ಮಾರ್ಗದಲ್ಲಿ ಆರು ನಿಲ್ದಾಣಗಳಿದ್ದು, ಜಯದೇವ ಆಸ್ಪತ್ರೆ ನಿಲ್ದಾಣವು ಗುಲಾಬಿ ಮತ್ತು ಹಳದಿ ಮಾರ್ಗಗಳ ನಡುವಿನ ಸಂಪರ್ಕ ಕೇಂದ್ರವಾಗಲಿದೆ. ಇದರಿಂದ ದಕ್ಷಿಣ ಬೆಂಗಳೂರಿನ ಪ್ರಯಾಣಿಕರಿಗೆ ಮೆಟ್ರೋ ರೈಲು ಬದಲಾಯಿಸುವುದು ಸುಲಭವಾಗಲಿದೆ.

ಈ ಮಾರ್ಗ ಕಾರ್ಯಾರಂಭ ಮಾಡಿದರೆ ಬೆಂಗಳೂರಿನ ಮೆಟ್ರೋ ಜಾಲದ ಒಟ್ಟು ಉದ್ದ 103.6 ಕಿ.ಮೀ.ಗೆ ವಿಸ್ತರಣೆಯಾಗಲಿದೆ. ದಕ್ಷಿಣ ಭಾಗದ ಸಂಚಾರ ದಟ್ಟಣೆ ಕಡಿಮೆ ಮಾಡುವುದರ ಜತೆಗೆ, ಪ್ರಯಾಣದ ಸಮಯ ಉಳಿಸಲು ಈ ಮಾರ್ಗ ನೆರವಾಗುವ ನಿರೀಕ್ಷೆಯಿದೆ. ಇದೀಗ ಉದ್ಘಾಟನಾ ದಿನಾಂಕದ ಘೋಷಣೆಯತ್ತ ಪ್ರಯಾಣಿಕರ ಚಿತ್ತ ನೆಟ್ಟಿದೆ.

# ಸ್ಟಿಂಗ್ ಪ್ರಕರಣದ ಸಮಗ್ರ ತನಿಖೆಯಾಗಲಿ: ವಿಜಯೇಂದ್ರ

● ವಿಕ್ರಮ ವಾಹಿನಿ | ಚಿತ್ರದುರ್ಗ

ರಾಜ್ಯದಲ್ಲಿ ಚರ್ಚೆಗೆ ಗ್ರಾಸವಾಗಿರುವ ಸ್ಟಿಂಗ್ ಆಪರೇಷನ್ ಪ್ರಕರಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಂಭೀರವಾಗಿ ಪರಿಗಣಿಸಿ, ಸಮಗ್ರ ತನಿಖೆ ನಡೆಸಬೇಕು. ತಪ್ಪಿತಸ್ಥರು ಯಾರೇ ಆಗಿರಲಿ, ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಟಿಂಗ್ ಆಪರೇಷನ್ ವಿಚಾರವನ್ನು ಮುಖ್ಯಮಂತ್ರಿಗಳೇ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಿ ಬಹಿರಂಗಪಡಿಸಿದ್ದಾರೆ. ಹೀಗಾಗಿ ಈ ಪ್ರಕರಣದಲ್ಲಿ ಹಿಟ್ ಅಂಡ್ ರನ್ ಮಾಡಲು ಸಾಧ್ಯವಿಲ್ಲ. ಇದರ ಹಿಂದಿರುವವರು ಯಾರು ಎಂಬುದು ತನಿಖೆಯಿಂದ ಬಹಿರಂಗವಾಗಬೇಕು ಎಂದರು.

ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಸ್ಟಿಂಗ್ ವಿಚಾರದಲ್ಲೇ ಮುಳುಗಿದ್ದು, ಜನರ ಸಮಸ್ಯೆಗಳಿಗೆ ಗಮನ ನೀಡುತ್ತಿಲ್ಲ. ರಾಜ್ಯದಲ್ಲಿ ಬರದ ಪರಿಸ್ಥಿತಿ ಇದ್ದರೂ ರೈತರಿಗೆ ಕೇವಲ 2,500 ಪರಿಹಾರ ನೀಡಿರುವುದು ಸಮರ್ಪಕವಲ್ಲ. ರೈತರ ಸಂಕಷ್ಟಕ್ಕೆ ಸರ್ಕಾರ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

**ದಸರಾ ಅವ್ಯವಸ್ಥೆಗೆ ಆಕ್ರೋಶ:** ಮೈಸೂರು ದಸರಾ ಸಂದರ್ಭದಲ್ಲಿ ದನಕರುಗಳ ಜಾತ್ರೆಯಲ್ಲಿ ಮೇವು, ರೈತರಿಗೆ ಊಟ ಹಾಗೂ ಮಹಿಳೆಯರಿಗೆ ಆಹಾರದ ವ್ಯವಸ್ಥೆ ಸಮರ್ಪಕವಾಗಿಲ್ಲ ಎಂಬ ದೂರುಗಳು ಬಂದಿವೆ. ದಸರಾ ಸಂದರ್ಭದಲ್ಲಿ ಇಂತಹ ಅವ್ಯವಸ್ಥೆ ಹಿಂದೆಂದೂ ಕಂಡಿರಲಿಲ್ಲ ಎಂದು ವಿಜಯೇಂದ್ರ ಅಸಮಾಧಾನ ವ್ಯಕ್ತಪಡಿಸಿದರು.



ಸ್ಟಿಂಗ್ ಪ್ರಕರಣದ ವಿರುದ್ಧ ಜೆಡಿಎಸ್ ಸ್ವತಂತ್ರವಾಗಿ ಹೋರಾಟ ನಡೆಸಲು ನಿರ್ಧರಿಸಿದೆ. ಅವರು ಹೋರಾಟ ನಡೆಸಲಿ; ಬಿಜೆಪಿ ತನ್ನದೇ ಆದ ರೀತಿಯಲ್ಲಿ ಮುಂದಿನ ಕ್ರಮ ಕೈಗೊಳ್ಳಲಿದೆ ಎಂದರು.

**ಕಬ್ಬು ಬೆಳೆಗಾರರ ಹೋರಾಟಕ್ಕೆ ಬೆಂಬಲ:** ಕಬ್ಬು ಬೆಳೆಗಾರರ ಹೋರಾಟ ಮತ್ತು ಪಾದಯಾತ್ರೆಗೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದೆ. ರೈತರ ಸಮಸ್ಯೆ ಪರಿಶೀಲಿಸಲು ಕೇಂದ್ರ ಸರ್ಕಾರ ಸಮಿತಿ ರಚಿಸಿದ್ದು, ದಸರಾ ಬಳಿಕ ರೈತರ ಅಹವಾಲುಗಳನ್ನು ಆಲಿಸಲಿದೆ. ಕೇಂದ್ರದ ಜತೆಗೆ ರಾಜ್ಯ ಸರ್ಕಾರವೂ ತನ್ನ ಜವಾಬ್ದಾರಿ ನಿರ್ವಹಿಸಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರ ಕಬ್ಬಿಗೆ ಸೂಕ್ತ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ನಿಗದಿಪಡಿಸಬೇಕು. ಪ್ರತಿ ಟನ್ ಕಬ್ಬಿಗೆ ಹೆಚ್ಚುವರಿಯಾಗಿ 1,000 ನೀಡುವ ರೈತರ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಬೇಕು.

ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬಿನ ತೂಕದಲ್ಲಿ ವಂಚನೆಯಾಗುತ್ತಿದೆ ಎಂಬ ಆರೋಪಗಳ ಬಗ್ಗೆಯೂ ಸಮಗ್ರ ತನಿಖೆ ನಡೆಸಿ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಇದಕ್ಕೂ ಮುನ್ನ ಚಿತ್ರದುರ್ಗದ ಮುರುಘಾಮಠದ ಅನುಭವ ಮಂಟಪದಲ್ಲಿ ನಡೆದ ಶರಣ ಸಂಸ್ಕೃತಿ ಉತ್ಸವದ 'ವಚನ ಝೇಂಕಾರ' ಕಾರ್ಯಕ್ರಮದಲ್ಲಿ ವಿಜಯೇಂದ್ರ ಭಾಗವಹಿಸಿದರು. ವಿವಿಧ ಮಠಗಳ ಸ್ವಾಮೀಜಿಗಳು, ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಮಾಜಿ ಶಾಸಕ ಜಿ.ಎಚ್. ತಿಪ್ಪಾರೆಡ್ಡಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.



### ಹಿರಿಯೂರು ಉಪಚುನಾವಣೆ ಕುರಿತು ಚರ್ಚೆ

ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಸಂಬಂಧಿಸಿದಂತೆ ಪಕ್ಷದ ಕೇಂದ್ರ ಕೋರ್ ಕಮಿಟಿಯಲ್ಲಿ ಚರ್ಚೆ ನಡೆದಿದೆ. ಆಕಾಂಕ್ಷಿಗಳ ಹೆಸರುಗಳನ್ನು ಪರಿಶೀಲಿಸಿ ಅಭ್ಯರ್ಥಿಗಳ ಪಟ್ಟಿಯನ್ನು ಕೇಂದ್ರ ಚುನಾವಣಾ ಸಮಿತಿಗೆ ಕಳುಹಿಸಲಾಗುವುದು. ಬಿಜೆಪಿ ಅಥವಾ ಜೆಡಿಎಸ್ ಅಭ್ಯರ್ಥಿ ಕಣಕ್ಕಿಳಿಯುವ ಬಗ್ಗೆ ಮೈತ್ರಿ ನಾಯಕರು ಸಮಾಲೋಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದರು.

ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ವಿಜಯೇಂದ್ರ, ಚುನಾವಣಾ ಸೋಲಿನಿಂದ ಹತಾಶರಾಗಿರುವ ರಾಹುಲ್ ಗಾಂಧಿ ವಿವಿಧ ಸಂಘಟನೆಗಳ ಮೂಲಕ ದೇಶದಲ್ಲಿ ಗೊಂದಲ ಸೃಷ್ಟಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

# 'ಕಬ್ಬು ಬೆಳೆಗಾರರ ಪರ ಸರ್ಕಾರಗಳ ನಿರ್ಲಕ್ಷ್ಯ'

● ವಿಕ್ರಮ ವಾಹಿನಿ | ಬೆಂಗಳೂರು

ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳುತ್ತಿದ್ದರೂ, ರಾಜ್ಯ ಕಾಂಗ್ರೆಸ್ ಸರ್ಕಾರ ತನ್ನ ಜವಾಬ್ದಾರಿ ನಿರ್ವಹಿಸುತ್ತಿಲ್ಲ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಬ್ಬಿನ ಬೆಂಬಲ ಬೆಲೆ ನಿಗದಿಗೆ ಕೇಂದ್ರ ಸರ್ಕಾರ ಸಮಿತಿ ರಚಿಸಿದ್ದು, ರೈತರ ಬೇಡಿಕೆಗಳ ಪರಿಶೀಲನೆ ನಡೆಯುತ್ತಿದೆ. ರಾಜ್ಯದಲ್ಲಿ ಕಬ್ಬಿನ ತೂಕ ಹಾಗೂ ತ್ಯಾಜ್ಯದ ಪ್ರಮಾಣದಲ್ಲಿ ವಂಚನೆಯಾಗುತ್ತಿದೆ ಎಂಬ ಆರೋಪಗಳ ಕುರಿತು ತನಿಖೆ ನಡೆಸಬೇಕು. ರೈತರಿಗೆ ಸಮರ್ಪಕ ಬೆಳೆ ವಿಮೆ ಒದಗಿಸುವುದರ ಜತೆಗೆ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸರ್ವಪಕ್ಷ ನಿಯೋಗದೊಂದಿಗೆ ದೆಹಲಿಗೆ ತೆರಳಿ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಬೇಕು. ಎರಡೂ ಸರ್ಕಾರಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ರೈತರ ಸಮಸ್ಯೆ ಪರಿಹರಿಸಬೇಕು ಎಂದರು.

ರಾಮನಗರದಲ್ಲಿ ಪ್ರತಿಭಟನೆ ನಡೆಸುತ್ತಿರುವ ವಿಕಲಚೇತನರಿಗೆ ಐದು ತಿಂಗಳಿಂದ ಮಾಸಾಶನ ನೀಡಿಲ್ಲ ಎಂದು ಆರೋಪಿಸಿದ ಅಶೋಕ, ಬಾಕಿ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಹಾಗೂ ಪ್ರತಿಭಟನಾಕಾರರ ಮೇಲೆ ಲಾಠಿಪ್ರಹಾರ ನಡೆಸಿರುವುದನ್ನು ಖಂಡಿಸಿದರು. ರಾಜ್ಯದ ಇಂದಿರಾ ಕಿಟ್ ಯೋಜನೆ ಇನ್ನೂ ಅನುಷ್ಠಾನಗೊಂಡಿಲ್ಲ ಎಂದು ಟೀಕಿಸಿದ ಅವರು, ಜನರಿಗೆ ನೀಡಿದ ಭರವಸೆಗಳನ್ನು ಸರ್ಕಾರ ಈಡೇರಿಸಬೇಕು ಎಂದು ಆಗ್ರಹಿಸಿದರು. ಕಾಂಗ್ರೆಸ್‌ನ ಆಂತರಿಕ ಪ್ರಜಾಪ್ರಭುತ್ವ ಮತ್ತು ವಿದೇಶಿ ಹಣಕಾಸಿನ ನೆರವಿನ ಕುರಿತ ಆರೋಪಗಳ ಬಗ್ಗೆಯೂ ಪ್ರಶ್ನೆ ಎತ್ತಿ, ರಾಹುಲ್ ಗಾಂಧಿ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು.



ಕಬ್ಬಿನ ಕನಿಷ್ಠ ಬೆಂಬಲ ಬೆಲೆ ಹೆಚ್ಚಳಕ್ಕೆ ಆಗ್ರಹಿಸಿ ಪಾದಯಾತ್ರೆ ನಡೆಸುತ್ತಿದ್ದ ಕಬ್ಬು ಬೆಳೆಗಾರರನ್ನು ಭೇಟಿ ಮಾಡಲು ಬೆಳಗಾವಿಯ ಕಿತ್ತೂರಿಗೆ ಆಗಮಿಸಿದ ಸಿಎಂ ಡಿ ಕೆ ಶಿವಕುಮಾರ್ ರಾಣಿ ಚನ್ನಮ್ಮ ಪ್ರತಿಮೆಗೆ ಶನಿವಾರ ಮಾಲಾರ್ಪಣೆ ಮಾಡಿದರು. ಸಚಿವರಾದ ಸತೀಶ್ ಜಾರಕಿಹೊಳಿ, ಲಕ್ಷ್ಮಣ್ ಸವದಿ, ಸಂತೋಷ್ ಲಾಡ್, ಶಾಸಕರಾದ ವಿನಯ್ ಕುಲಕರ್ಣಿ, ಲಕ್ಷ್ಮೀ ಹೆಬ್ಬಾಳಕರ, ಬಾಬಾ ಸಾಹೇಬ್ ಪಾಟೀಲ್, ಅಶೋಕ್ ಪಟ್ಟಣ್, ಮಹೇಂದ್ರ ಕಲ್ಲಪ್ಪ ತಮ್ಮಣವರ್, ಎನ್ ಎಚ್ ಕೋನರೆಡ್ಡಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ ಅಧ್ಯಕ್ಷರಾದ ಎಚ್ ಎಂ ರೇವಣ್ಣ, ರಾಜ್ಯ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜಾರಿ, ಶಶಿಕಾಂತ ಗೂರೂಜಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಸತ್ಯ ಸಾಯಿ ಗ್ರಾಮದಲ್ಲಿ 18ರಿಂದ 21ರವರೆಗೆ ಮಹಾರುದ್ರ ಯಾಗ

● ವಿಕ್ರಮ ವಾಹಿನಿ | ಚಿಕ್ಕಬಳ್ಳಾಪುರ

ವಿಶ್ವಶಾಂತಿ ಮತ್ತು ಸಮೃದ್ಧಿಯನ್ನು ಸಂಕಲ್ಪವಾಗಿಸಿಕೊಂಡು ಮುದ್ದೇನಹಳ್ಳಿಯ ಸತ್ಯ ಸಾಯಿ ಗ್ರಾಮದಲ್ಲಿ ಅಕ್ಟೋಬರ್ 18ರಿಂದ 21ರವರೆಗೆ ನಾಲ್ಕು ದಿನಗಳ ಮಹಾರುದ್ರ ಯಾಗ ನಡೆಯಲಿದೆ.

ಸತ್ಯ ಸಾಯಿ ಹೃದಯ ಮಂದಿರದ ಆವರಣದಲ್ಲಿರುವ ಯಾಗಶಾಲೆಯಲ್ಲಿ ನಡೆಯಲಿರುವ ಯಾಗವು ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಸಾನ್ನಿಧ್ಯದಲ್ಲಿ ಜರುಗಲಿದೆ. ಅಕ್ಟೋಬರ್ 11ರಿಂದ 21ರವರೆಗೆ ನಡೆಯುತ್ತಿರುವ ನವರಾತ್ರಿ ಹೋಮ, ದುರ್ಗಾ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳ ಭಾಗವಾಗಿ ಮಹಾರುದ್ರ ಯಾಗವನ್ನು ಆಯೋಜಿಸಲಾಗಿದೆ.

ಶಿವನ ಆರಾಧನೆಗೆ ವಿಶೇಷ ಮಹತ್ವ ಹೊಂದಿರುವ ಈ ಯಾಗದಲ್ಲಿ ರುದ್ರ ಪಾರಾಯಣ, ರುದ್ರಾಭಿಷೇಕ, ರುದ್ರ ಹೋಮ, ಮೃತ್ಯುಂಜಯ ಹೋಮ ಹಾಗೂ ಸಾಯಿ ಗಾಯತ್ರಿ ಹೋಮ ಸೇರಿದಂತೆ ವಿವಿಧ ಧಾರ್ಮಿಕ ವಿಧಿವಿಧಾನಗಳು ನಡೆಯಲಿವೆ.

**ಪ್ರತಿದಿನ ಬೆಳಿಗ್ಗೆ ಧಾರ್ಮಿಕ ವಿಧಿವಿಧಾನಗಳು**

ಅಕ್ಟೋಬರ್ 18ರಿಂದ 20ರವರೆಗೆ ಪ್ರತಿದಿನ ಬೆಳಿಗ್ಗೆ 6.30ಕ್ಕೆ ಅರುಣ ಪಾರಾಯಣದೊಂದಿಗೆ ಕಾರ್ಯಕ್ರಮಗಳು ಆರಂಭವಾಗಲಿವೆ. ಬೆಳಿಗ್ಗೆ 7.15ಕ್ಕೆ ಮಹಾನ್ಯಾಸ ಪಾರಾಯಣ, 7.45ಕ್ಕೆ ಪಂಚಾಮೃತ ಅಭಿಷೇಕ ಹಾಗೂ 8 ಗಂಟೆಗೆ ರುದ್ರ ಪಾರಾಯಣ ಮತ್ತು ರುದ್ರಾಭಿಷೇಕ ನಡೆಯಲಿವೆ. ಬೆಳಿಗ್ಗೆ 10 ಗಂಟೆಗೆ ರುದ್ರ ಹೋಮ, ಮೃತ್ಯುಂಜಯ ಹೋಮ ಮತ್ತು ಸಾಯಿ ಗಾಯತ್ರಿ ಹೋಮ ನೆರವೇರಲಿದ್ದು, 11.30ಕ್ಕೆ ಅಷ್ಟಾವಧಾನ ಸೇವೆ ಹಾಗೂ ಮಹಾಮಂಗಳಾರತಿ ನಡೆಯಲಿದೆ. ಸಂಜೆ 4 ಗಂಟೆಗೆ ಕ್ರಮಾರ್ಚನೆ ಮತ್ತು ಘನಪಾಠ ನಡೆಯಲಿದ್ದು, ಸಂಜೆ 5 ಗಂಟೆಗೆ ಮಹಾಮಂಗಳಾರತಿ ನೆರವೇರಲಿದೆ.

**21ರಂದು ಮಹಾಪೂರ್ಣಾಹುತಿ:** ವಿಜಯದಶಮಿಯ ದಿನವಾದ ಅಕ್ಟೋಬರ್ 21ರಂದು ಬೆಳಿಗ್ಗೆ 5.30ಕ್ಕೆ ಮಂಗಳವಾದ್ಯಗಳೊಂದಿಗೆ ಕಾರ್ಯಕ್ರಮ ಆರಂಭವಾಗಲಿದೆ. ಬೆಳಿಗ್ಗೆ 6.30ಕ್ಕೆ ಅರುಣ ಪಾರಾಯಣ, ಮಹಾನ್ಯಾಸ ಪಾರಾಯಣ, ರುದ್ರ ಪಾರಾಯಣ ಮತ್ತು ರುದ್ರಾಭಿಷೇಕ ನಡೆಯಲಿವೆ. ಬೆಳಿಗ್ಗೆ 10 ಗಂಟೆಗೆ ರುದ್ರ ಹೋಮ, ಸಾಯಿ ಗಾಯತ್ರಿ ಹೋಮ ಹಾಗೂ ಮಹಾಪೂರ್ಣಾಹುತಿ ನೆರವೇರಲಿವೆ. ಬೆಳಿಗ್ಗೆ 11.15ಕ್ಕೆ ಅಗ್ನಿ ಸಂಯೋಜನೆ, ಕುಂಭಾಭಿಷೇಕ ಮತ್ತು ಮಹಾಮಂಗಳಾರತಿಯೊಂದಿಗೆ ಯಾಗದ ಧಾರ್ಮಿಕ ವಿಧಿವಿಧಾನಗಳು ಸಂಪನ್ನಗೊಳ್ಳಲಿವೆ.

ಯಾಗದ ಮೂಲಕ ಲೋಕಕಲ್ಯಾಣ, ಶಾಂತಿ ಮತ್ತು ಸಮೃದ್ಧಿಗಾಗಿ ಪ್ರಾರ್ಥನೆ ಸಲ್ಲಿಸುವುದು ಕಾರ್ಯಕ್ರಮದ ಪ್ರಮುಖ ಆಶಯವಾಗಿದೆ.

# ಎಸ್‌ಎಸ್‌ಎಲ್‌ಸಿ, ಪಿಯುಸಿಗೆ ಇನ್ಮುಂದೆ ಎರಡು ಮುಖ್ಯ ಪರೀಕ್ಷೆ?

● ವಿಕ್ರಮ ವಾಹಿನಿ | ಬೆಂಗಳೂರು

*ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಪರೀಕ್ಷಾ ವ್ಯವಸ್ಥೆಯಲ್ಲಿ ಬದಲಾವಣೆಯಾಗುವ ಸಾಧ್ಯತೆಯಿದೆ. ಕಳೆದ ಎರಡು ವರ್ಷಗಳಿಂದ ನಡೆಸಲಾಗುತ್ತಿದ್ದ ಮೂರು ಮುಖ್ಯ ಪರೀಕ್ಷೆಗಳ ಬದಲಿಗೆ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಎರಡು ಪರೀಕ್ಷೆಗಳನ್ನು ಮಾತ್ರ ನಡೆಸಲು ಶಿಕ್ಷಣ ಇಲಾಖೆ ಮುಂದಾಗಿದೆ ಎಂದು ತಿಳಿದುಬಂದಿದೆ. ಆದರೆ, ಈ ಕುರಿತು ಅಧಿಕೃತ ಪ್ರಕಟಣೆ ಹೊರಬಿದ್ದಿರುವ ಬಗ್ಗೆ ಸ್ಪಷ್ಟತೆ ಇಲ್ಲ.*

*ಇದೇ ವೇಳೆ, 2027ರ ದ್ವಿತೀಯ ಪಿಯುಸಿ ಪರೀಕ್ಷೆ–1ರ ತಾತ್ಕಾಲಿಕ ವೇಳಾಪಟ್ಟಿ ಪ್ರಕಟವಾಗಿದ್ದು, ಫೆಬ್ರವರಿ 27ರಿಂದ ಮಾರ್ಚ್ 17ರವರೆಗೆ ಪರೀಕ್ಷೆಗಳು ನಡೆಯಲಿವೆ. ಪರೀಕ್ಷೆಗಳು ಪ್ರತಿದಿನ ಬೆಳಿಗ್ಗೆ 10ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆಯಲಿವೆ.*

*ಫೆಬ್ರವರಿ 27ರಂದು ಕನ್ನಡ/ಅರೇಬಿಕ್ ಪರೀಕ್ಷೆಯೊಂದಿಗೆ ಆರಂಭವಾಗುವ ಪರೀಕ್ಷೆಗಳು ಮಾರ್ಚ್ 17ರಂದು ಹಿಂದಿ ಪರೀಕ್ಷೆಯೊಂದಿಗೆ ಮುಕ್ತಾಯಗೊಳ್ಳಲಿವೆ. ಮಾರ್ಚ್ 6ರಂದು ಮಹಾಶಿವರಾತ್ರಿ ಹಾಗೂ ಮಾರ್ಚ್ 10ರಂದು ರಂಜಾನ್ ಹಿನ್ನೆಲೆಯಲ್ಲಿ ಪರೀಕ್ಷೆ ಇರುವುದಿಲ್ಲ ಎಂದು ತಾತ್ಕಾಲಿಕ ವೇಳಾಪಟ್ಟಿಯಲ್ಲಿ ತಿಳಿಸಲಾಗಿದೆ.*

*ಫೆಬ್ರವರಿ 27ರಂದು ಕನ್ನಡ/ಅರೇಬಿಕ್, ಮಾರ್ಚ್ 1ರಂದು ಇಂಗ್ಲಿಷ್ ಹಾಗೂ ಮಾರ್ಚ್ 2ರಂದು ಪ್ರಾದೇಶಿಕ ಭಾಷೆಗಳ ಪರೀಕ್ಷೆ ನಡೆಯಲಿದೆ. ಮಾರ್ಚ್ 3ರಂದು ಭೂಗೋಳಶಾಸ್ತ್ರ ಮತ್ತು ಮನಃಶಾಸ್ತ್ರ, ಮಾರ್ಚ್ 4ರಂದು ಸಮಾಜಶಾಸ್ತ್ರ ಮತ್ತು ಭೌತಶಾಸ್ತ್ರ, ಮಾರ್ಚ್ 5ರಂದು ಲೆಕ್ಕಶಾಸ್ತ್ರ ಪರೀಕ್ಷೆಗಳು ನಡೆಯಲಿವೆ.*

*ಮಾರ್ಚ್ 8ರಂದು ರಸಾಯನಶಾಸ್ತ್ರ, ಶಿಕ್ಷಣಶಾಸ್ತ್ರ ಮತ್ತು ಮೂಲ ಗಣಿತ, ಮಾರ್ಚ್ 9ರಂದು ಅರ್ಥಶಾಸ್ತ್ರ ಮತ್ತು ಭೂಗರ್ಭಶಾಸ್ತ್ರ ಪರೀಕ್ಷೆಗಳಿವೆ. ಮಾರ್ಚ್ 11ರಂದು ಹಿಂದೂಸ್ತಾನಿ ಸಂಗೀತ ಹಾಗೂ ವೃತ್ತಿಪರ ವಿಷಯಗಳು, ಮಾರ್ಚ್ 12ರಂದು ವ್ಯವಹಾರ ಅಧ್ಯಯನ ಮತ್ತು ಗಣಿತ, ಮಾರ್ಚ್ 13ರಂದು ಐಚ್ಛಿಕ ಕನ್ನಡ, ತರ್ಕಶಾಸ್ತ್ರ ಮತ್ತು ಗೃಹವಿಜ್ಞಾನ ಪರೀಕ್ಷೆಗಳು ನಡೆಯಲಿವೆ.*

*ಮಾರ್ಚ್ 15ರಂದು ರಾಜ್ಯಶಾಸ್ತ್ರ, ಜೀವಶಾಸ್ತ್ರ ಮತ್ತು ಗಣಕಶಾಸ್ತ್ರ, ಮಾರ್ಚ್ 16ರಂದು ಇತಿಹಾಸ, ಸಂಖ್ಯಾಶಾಸ್ತ್ರ ಮತ್ತು ವಿದ್ಯುನ್ಮಾನಶಾಸ್ತ್ರ ಪರೀಕ್ಷೆಗಳು ನಡೆಯಲಿದ್ದು, ಮಾರ್ಚ್ 17ರಂದು ಹಿಂದಿ ಪರೀಕ್ಷೆಯೊಂದಿಗೆ ಪರೀಕ್ಷಾ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.*

*ಹೊಸ ಪರೀಕ್ಷಾ ವ್ಯವಸ್ಥೆ ಜಾರಿಗೆ ಬಂದರೆ ವಿದ್ಯಾರ್ಥಿಗಳು ಅದಕ್ಕೆ ಅನುಗುಣವಾಗಿ ಓದಿನ ಯೋಜನೆ ರೂಪಿಸಿಕೊಳ್ಳಬೇಕಾಗುತ್ತದೆ. ಪಠ್ಯಕ್ರಮದ ಪುನರಾವರ್ತನೆ, ಮಾದರಿ ಪ್ರಶ್ನೆಪತ್ರಿಕೆಗಳ ಅಭ್ಯಾಸ ಮತ್ತು ಸಮಯ ನಿರ್ವಹಣೆಗೆ ಆದ್ಯತೆ ನೀಡುವುದು ಅಗತ್ಯವಾಗಿದೆ.*

# ನೂತನ ರಾಜ್ಯಪಾಲರನ್ನು ಭೇಟಿಯಾಗಿ ಶುಭ ಕೋರಿದ ಕುಮಾರಸ್ವಾಮಿ

● ವಿಕ್ರಮ ವಾಹಿನಿ | ಬೆಂಗಳೂರು

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಜೆಡಿಎಸ್ ಪಕ್ಷದ ಎಲ್ಲಾ ಶಾಸಕರು ಶನಿವಾರ ಲೋಕಭವನಕ್ಕೆ ತೆರಳಿ ನೂತನ ರಾಜ್ಯಪಾಲರಾದ ಶ್ರೀಮತಿ ಸುಧಾ ಯಾದವ್ ಅವರನ್ನು ಗೌರವಪೂರ್ವಕವಾಗಿ ಭೇಟಿ ಮಾಡಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಕೇಂದ್ರ ಸಚಿವರ ಧರ್ಮಪತ್ನಿ ಹಾಗೂ ಮಾಜಿ ಶಾಸಕಿ ಆಗಿರುವ ಶ್ರೀಮತಿ ಅನಿತಾ ಕುಮಾರಸ್ವಾಮಿ ಅವರು ಹಾಜರಿದ್ದರು.

ರಾಜ್ಯಕ್ಕೆ ನೂತನ ರಾಜ್ಯಪಾಲರಾಗಿ ಬಂದಿರುವ ಸುಧಾ ಯಾದವ್ ಅವರನ್ನು ಅಭಿನಂದಿಸಿದ ಕೇಂದ್ರ ಸಚಿವರು, ತಮ್ಮ ಮೂಲಕ ರಾಜ್ಯದಲ್ಲಿ ಸಂಸದೀಯ ಪರಂಪರೆಯು ಇನ್ನಷ್ಟು ಎತ್ತರಕ್ಕೆ ಏರಲಿ ಎಂದು ಆಶಿಸಿದರು. ತಮ್ಮಿಂದ ರಾಜ್ಯದ ಅಭಿವೃದ್ಧಿಗೆ ಅಗತ್ಯ ಮಾರ್ಗದರ್ಶನ ಸಿಗುವಂತೆ ಆಗಲಿ ಮತ್ತು ತಮಗೆ ಜೆಡಿಎಸ್ ಪಕ್ಷದಿಂದ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ಸಚಿವ ಕುಮಾರಸ್ವಾಮಿ ಅವರು ತಿಳಿಸಿದರು.



ತದನಂತರ ಲೋಕಭವನದ ಹೊರಗೆ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು; ರಾಜ್ಯಕ್ಕೆ ರಾಜ್ಯಪಾಲರಾಗಿ ಬಂದ ಎರಡನೇ ಮಹಿಳೆ ಶ್ರೀಮತಿ ಸುಧಾ ಯಾದವ್ ಅವರಾಗಿದ್ದಾರೆ. ಅವರ ನೇತೃತ್ವದಲ್ಲಿ ರಾಜ್ಯಕ್ಕೆ ಒಳ್ಳೆಯದಾಗಲಿ ಎಂದು ಆಶಿಸಿದರು.

ಒಂದು ಕಾಲದಲ್ಲಿ ಅತ್ಯುತ್ತಮ ಆಡಳಿತದ ಮೂಲಕ ದೇಶಕ್ಕೆ ಮಾದರಿಯಾಗಿದ್ದ ಈ ರಾಜ್ಯವು ಪ್ರಸ್ತುತ ದಾರಿ ತಪ್ಪುತ್ತಿದ್ದು, ಅದನ್ನು ಸರಿಪಡಿಸಿ ಉತ್ತಮ ರಾಜ್ಯವನ್ನಾಗಿ ಮರುಸ್ಥಾಪಿಸುವಂತೆ ರಾಜ್ಯಪಾಲರಿಗೆ ಮನವಿ ಮಾಡಲಾಗಿದೆ. ರಾಜ್ಯಪಾಲರ ಪತಿ ಕಾರ್ಗಿಲ್ ಯುದ್ಧದಲ್ಲಿ ವೀರಮರಣ ಹೊಂದಿದ ಅಮರ ವೀರರಾಗಿದ್ದು, ಅವರಿಗೆ ದೇಶದ ಬಗ್ಗೆ ಅಪಾರ ಭಕ್ತಿ ಮತ್ತು ಗೌರವವಿದೆ ಹಾಗೂ ಅವರಿಗೆ ಕಾರ್ಯನಿರ್ವಹಿಸಲು ಭಗವಂತ ಹೆಚ್ಚಿನ ಶಕ್ತಿ ನೀಡಲಿ ಎಂದು ತಾವು ಪ್ರಾರ್ಥಿಸಿರುವುದಾಗಿ ತಿಳಿಸಿದರು ಸಚಿವರು.

ಪ್ರಸ್ತುತ ರಾಜ್ಯದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು, ಕೆಟ್ಟ ಘಟನೆಗಳು ಸೇರಿದಂತೆ ವಿವಿಧ ಅಂಶಗಳ ಬಗ್ಗೆ ಮಾನ್ಯ ರಾಜ್ಯಪಾಲರ ಗಮನ ಸೆಳೆಯಲಾಯಿತು. ಅವರು ಹೊಸದಾಗಿ ರಾಜ್ಯಕ್ಕೆ ಬಂದಿದ್ದು, ಮತ್ತೊಮ್ಮೆ ರಾಜ್ಯಪಾಲರನ್ನು ಭೇಟಿಯಾಗಿ ವಿವರವಾಗಿ ಚರ್ಚಿಸಿ ದೂರು ನೀಡಲಾಗುವುದು ಎಂದು ಸಚಿವರು ಹೇಳಿದರು.

ಕರ್ನಾಟಕದ ಬಗ್ಗೆ ರಾಜ್ಯಪಾಲರಿಗೆ ಅಪಾರ ಅಭಿಮಾನವಿದೆ. ರಾಜ್ಯದ ಕಲೆ, ಸಂಸ್ಕೃತಿ, ಸಾಹಿತ್ಯ ಸೇರಿದಂತೆ ಒಟ್ಟಾರೆ ಪರಂಪರೆಯ ಬಗ್ಗೆ ಅವರಿಗೆ ಮಾಹಿತಿ ಇದೆ. ಅವರ ಸಾಂವಿಧಾನಿಕ ನೇತೃತ್ವದಲ್ಲಿ ಕರ್ನಾಟಕಕ್ಕೆ ಒಳ್ಳೆಯದಾಗಲಿದೆ ಎಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು.

# ಇನ್‌ಸ್ಟಾಗ್ರಾಂ ಪರಿಚಯ: 15ರ ಬಾಲಕಿಗೆ ಹೆರಿಗೆ

● ವಿಕ್ರಮ ವಾಹಿನಿ | ಗುರುಗ್ರಾಮ

ಇನ್‌ಸ್ಟಾಗ್ರಾಂ ಮೂಲಕ ಪರಿಚಯವಾಗಿದ್ದ 22 ವರ್ಷದ ಯುವಕನಿಂದ ಲೈಂಗಿಕ ದೌರ್ಜನ್ಯಕ್ಕೊಳಗಾಗಿದ್ದ 15 ವರ್ಷದ ಬಾಲಕಿಯೊಬ್ಬಳು ಹರಿಯಾಣದ ಗುರುಗ್ರಾಮ ಜಿಲ್ಲೆಯ ಸೋಹ್ನಾದ ಸರ್ಕಾರಿ ಆಸ್ಪತ್ರೆಯಲ್ಲಿ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ. ತೀವ್ರ ಹೊಟ್ಟೆನೋವಿನಿಂದ ಆಸ್ಪತ್ರೆಗೆ ದಾಖಲಿಸಿದಾಗ ಬಾಲಕಿ ಗರ್ಭಿಣಿಯಾಗಿರುವುದು ಪೋಷಕರಿಗೆ ತಿಳಿದುಬಂದಿದೆ.

ವೈದ್ಯರು ಪೊಲೀಸರಿಗೆ ಮಾಹಿತಿ ನೀಡಿದ ಬಳಿಕ ತನಿಖೆ ಆರಂಭವಾಗಿದೆ. ಕೌನ್ಸೆಲಿಂಗ್ ವೇಳೆ ಬಾಲಕಿ, ಒಂದೂವರೆ ವರ್ಷದ ಹಿಂದೆ ಇನ್‌ಸ್ಟಾಗ್ರಾಂನಲ್ಲಿ ಯುವಕನ ಪರಿಚಯವಾಗಿದ್ದು, ಆತ ವಿವಿಧ ಸ್ಥಳಗಳಲ್ಲಿ ಭೇಟಿಯಾಗಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಹೇಳಿಕೆ ನೀಡಿದ್ದಾಳೆ. ಭಯದಿಂದ ಈ ವಿಚಾರವನ್ನು ಪೋಷಕರಿಗೆ ತಿಳಿಸಿರಲಿಲ್ಲ ಎಂದು ತಿಳಿಸಿದ್ದಾಳೆ. ಬಾಲಕಿಯ ಹೇಳಿಕೆಯ ಆಧಾರದ ಮೇಲೆ ಆರೋಪಿಯ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಸದ್ಯ ತಾಯಿ ಮತ್ತು ಮಗು ಆರೋಗ್ಯವಾಗಿದ್ದಾರೆ ಎಂದು ತಿಳಿದುಬಂದಿದೆ.

# ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ಕೇಂದ್ರ ಬದ್ಧ: ಜೋಶಿ

● ವಿಕ್ರಮ ವಾಹಿನಿ | ಶಿಗ್ಗಾವಿ

ರೈತರು ದೇಶದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಅವರನ್ನು ಕಡೆಗಣಿಸುವ ಪ್ರಶ್ನೆಯೇ ಇಲ್ಲ. ಕಬ್ಬು ಬೆಳೆಗಾರರ ಸಮಸ್ಯೆಗಳ ಪರಿಹಾರಕ್ಕಾಗಿ ಕೇಂದ್ರ ಸರ್ಕಾರ ಜಂಟಿ ಸಮಿತಿ ರಚಿಸಿದ್ದು, ನಾಲ್ಕೈದು ದಿನಗಳಲ್ಲಿ ಅಧ್ಯಯನ ಆರಂಭಿಸಲಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು.



ಶಿಗ್ಗಾವಿಯಲ್ಲಿ ಶನಿವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರೈತರು ಪ್ರತಿಭಟನೆ ಕೈಬಿಟ್ಟು ಸಮಿತಿಯ ಕಾರ್ಯಕ್ಕೆ ಸಹಕರಿಸಬೇಕು. ರೈತ ಮುಖಂಡರು ಮಾತುಕತೆಗೆ ಬಂದರೆ ಕೇಂದ್ರ ಸರ್ಕಾರ ಚರ್ಚೆಗೆ ಸಿದ್ಧವಿದೆ. ಸಮಿತಿಯು ಕಬ್ಬು ಬೆಳೆಗಾರರ ಬೇಡಿಕೆಗಳು ಹಾಗೂ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ಸೇರಿದಂತೆ ವಿವಿಧ ವಿಚಾರಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲಿದೆ ಎಂದರು.

**ಎಸ್‌ಎಪಿ ಘೋಷಣೆಗೆ ಒತ್ತಾಯ:** ಕಬ್ಬು ಬೆಳೆಗಾರರ ಸಮಸ್ಯೆ ಪರಿಹರಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಎಸ್‌ಎಪಿಯನ್ನು ತಕ್ಷಣ ಘೋಷಿಸಬೇಕು ಎಂದು ಒತ್ತಾಯಿಸಿದ ಜೋಶಿ, ಈ ಸಂಬಂಧ ರಾಜ್ಯ ಸರ್ಕಾರಕ್ಕೆ ಈ ಹಿಂದೆಯೂ ಪತ್ರ ಬರೆದಿದ್ದು, ಇತ್ತೀಚೆಗೆ ದೆಹಲಿಗೆ ಬಂದಿದ್ದ ಮುಖ್ಯಮಂತ್ರಿಗಳೊಂದಿಗೂ ಚರ್ಚಿಸಿದ್ದೇನೆ ಎಂದರು. ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬಿನ ಇಳುವರಿ ಲೆಕ್ಕಾಚಾರ ಹಾಗೂ ತೂಕದಲ್ಲಿ ವಂಚನೆ ನಡೆಯದಂತೆ ಕ್ರಮ ಕೈಗೊಳ್ಳುವಂತೆಯೂ ಮನವಿ ಮಾಡಿರುವುದಾಗಿ ತಿಳಿಸಿದರು.

**ರೈತರ ಹಿತಕ್ಕೆ ಕೇಂದ್ರ ಬದ್ಧ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ರೈತರ ಪರವಾಗಿದ್ದು, ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಮೂಲಕ ಕೃಷಿ ಉತ್ಪನ್ನಗಳ ಖರೀದಿಗೆ ಒತ್ತು ನೀಡಿದೆ ಎಂದು ಹೇಳಿದರು. ಕಬ್ಬಿನ ಬೆಲೆ ರೈತರಿಗೆ ಅನುಕೂಲವಾಗಿರಬೇಕು; ಸಕ್ಕರೆ ಬೆಲೆ ಗ್ರಾಹಕರಿಗೆ ಹೊರೆಯಾಗಬಾರದು ಮತ್ತು ಕಾರ್ಖಾನೆಗಳೂ ನಷ್ಟ ಅನುಭವಿಸಬಾರದು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದರು.

ಎಥೆನಾಲ್ ಖರೀದಿಯನ್ನು ಹೆಚ್ಚಿಸುವ ಮೂಲಕ ಸಕ್ಕರೆ ಉದ್ಯಮಕ್ಕೆ ಬೆಂಬಲ ನೀಡಲಾಗುತ್ತಿದೆ. ಕರ್ನಾಟಕದಿಂದಲೂ ಹೆಚ್ಚಿನ ಪ್ರಮಾಣದಲ್ಲಿ ಎಥೆನಾಲ್ ಖರೀದಿಸುವಂತೆ ತೈಲ ಕಂಪನಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು. ರೈತರ ಪ್ರತಿಭಟನೆ ಹಾಗೂ ಟೀಕೆಗಳ ಬಗ್ಗೆ ಬೇಸರವಿಲ್ಲ. ರೈತರ ಸಮಸ್ಯೆಗಳನ್ನು ಪರಿಹರಿಸುವುದೇ ಮುಖ್ಯವಾಗಿದ್ದು, ಸಮಿತಿಯ ಅಧ್ಯಯನಕ್ಕೆ ರೈತ ಮುಖಂಡರು ಸಹಕರಿಸಬೇಕು ಎಂದು ಜೋಶಿ ಮನವಿ ಮಾಡಿದರು.

# ಕೆಪಿಎಸ್‌ಸಿ ಹಗರಣ ಬಿಜೆಪಿಯ ಕೂಸು: ಡಿಕೆಶಿ

● ವಿಕ್ರಮ ವಾಹಿನಿ | ಹುಬ್ಬಳ್ಳಿ

ಕೆಪಿಎಸ್‌ಸಿ ಹಗರಣ ಬಿಜೆಪಿಯ ಕೂಸು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆರೋಪಿಸಿದರು. ವಿದ್ಯಾರ್ಥಿಗಳು ಮತ್ತು ಪದವೀಧರರಿಗೆ ಅರ್ಹತೆಯ ಆಧಾರದಲ್ಲಿ ಉದ್ಯೋಗ ದೊರೆಯುವಂತೆ ಪಾರದರ್ಶಕ ಪರೀಕ್ಷಾ ವ್ಯವಸ್ಥೆ ರೂಪಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

ಪಶ್ಚಿಮ ಪದವೀಧರರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಹುಬ್ಬಳ್ಳಿಯ ಬಿವಿಬಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರ ನಡೆದ ಪದವೀಧರರ ಸಂವಾದದಲ್ಲಿ ಮಾತನಾಡಿದ ಅವರು, ಪರೀಕ್ಷಾ ವ್ಯವಸ್ಥೆಯಲ್ಲಿನ ಅಕ್ರಮಗಳ ಕುರಿತು ತನಿಖೆ ನಡೆದು ಸತ್ಯಾಂಶ ಹೊರಬರಬೇಕು ಎಂದರು. ಕಾಂಗ್ರೆಸ್ ಅಭ್ಯರ್ಥಿ ಮೋಹನ್ ಲಿಂಬಿಕಾಯಿ ಅವರನ್ನು ಬೆಂಬಲಿಸುವಂತೆ ಪದವೀಧರ ಮತದಾರರಿಗೆ ಮನವಿ ಮಾಡಿದರು.

**ಉದ್ಯೋಗ ಸೃಷ್ಟಿಗೆ ಒತ್ತು:** ನಿರುದ್ಯೋಗ ಸಮಸ್ಯೆ ನಿವಾರಿಸಲು ರಾಜ್ಯ ಸರ್ಕಾರ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಿದೆ. ಖಾಸಗಿ ಸಂಸ್ಥೆಗಳು ಮತ್ತು ಉದ್ಯೋಗಾಕಾಂಕ್ಷಿಗಳನ್ನು ಒಂದೇ ವೇದಿಕೆಯಲ್ಲಿ ಸಂಪರ್ಕಿಸುವ ಖಾಸಗಿ ಉದ್ಯೋಗ ವಿನಿಮಯ ವ್ಯವಸ್ಥೆ ರೂಪಿಸಲಾಗುತ್ತಿದೆ ಎಂದು ತಿಳಿಸಿದರು. ಬೆಂಗಳೂರು ಹೊರಗಿನ ನಗರಗಳಲ್ಲಿಯೂ ಕೈಗಾರಿಕೆಗಳನ್ನು ಸ್ಥಾಪಿಸಿ ಸ್ಥಳೀಯ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸಲು 'ಬಿಯಾಂಡ್ ಬೆಂಗಳೂರು' ಯೋಜನೆಗೆ ಒತ್ತು ನೀಡಲಾಗಿದೆ ಎಂದರು.

**ಎಸ್‌ಐಆರ್ ಬಗ್ಗೆ ಎಚ್ಚರಿಕೆ:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ವೇಳೆ ಮತದಾರರ ಹೆಸರುಗಳನ್ನು ಕೈಬಿಡುವ ಪ್ರಯತ್ನಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು. ಪ್ರತಿಯೊಬ್ಬರ ಮತದಾನದ ಹಕ್ಕನ್ನು ರಕ್ಷಿಸಲು ಕಾಂಗ್ರೆಸ್ ಹೋರಾಟ ನಡೆಸಿದೆ ಎಂದು ತಿಳಿಸಿದರು. ಶಿಕ್ಷಕರ ಗೌರವಾರ್ಥ 'ಟಿಆರ್' ಪದನಾಮ ಬಳಕೆಗೆ ರಾಜ್ಯ ಸರ್ಕಾರ ಆದೇಶಿಸಿರುವುದನ್ನೂ ಪ್ರಸ್ತಾಪಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 192,